
ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

18 ಏಪ್ರಿಲ್ 2026 ಶನಿವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ : 39 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಗ್ರೀನ್ ಅಬ್ಬರದ ಅರ್ಧ ಶತಕ (79 ರನ್). ಗುಜರಾತ್ ಟೈಟನ್ಸ್ ಗೆಲುವಿಗೆ 181 ರನ್ ಗುರಿ ನೀಡಿದ ಕೋಲ್ಕತ್ತಾ ನೈಟ್ ರೈಡರ್ಸ್...



ಬೇಸಿಗೆಯ ಬಿಸಿಲಿನಲ್ಲಿ ಮಕ್ಕಳೇಕೆ ಕಾಡಲ್ಲಿ ಸುತ್ತುತ್ತಿದ್ದರು » 2



ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ರೈತರ ಪ್ರತಿಭಟನೆ » 3



ಗ್ಯಾಸ್ ಬುಕ್ಕಿಂಗ್ ಅವಧಿ ಪುನರ್ ಪರಿಶೀಲಿಸಿ » 4

# ಮಹಿಳಾ ಮೀಸಲಾತಿ ಮಸೂದೆ ತಿರಸ್ಕಾರ

• ಪ್ರಜೋದಯ ವರದಿ

**ನವದೆಹಲಿ:** ಮಹಿಳಾ ಮೀಸಲಾತಿ ಮಸೂದೆಗೆ ಲೋಕಸಭೆಯಲ್ಲಿ ಸೋಲಾಗಿದೆ. ವಿಧೇಯಕ ಅಂಗೀಕಾರಗೊಳ್ಳಲು 352 ಸದಸ್ಯರ ಬೆಂಬಲ ಬೇಕಿತ್ತು. ಆದರೆ, ಮಸೂದೆ ಪರವಾಗಿ 298 ಸದಸ್ಯರು ಮತ ಚಲಾಯಿಸಿದ್ದರೆ, ವಿರುದ್ಧವಾಗಿ 230 ಸದಸ್ಯರು ಮತ ಚಲಾಯಿಸುವ ಮೂಲಕ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿಯ ವಿಧೇಯಕವನ್ನು ಇಂಡಿಯಾ ಮೈತ್ರಿಕೂಟ ಸೋಲಿಸಿದೆ.

ನಾರಿ ಶಕ್ತಿವಂದನ್ ಅಧಿನಿಯಮ (ಮಹಿಳಾ ಮೀಸಲಾತಿ ಕಾಯ್ದೆಗೆ) 131ನೇ ತಿದ್ದುಪಡಿ ತರುವ ಮೂಲಕ ಮಸೂದೆಯನ್ನು ಅಂಗೀಕರಿಸಲು ಕೇಂದ್ರಕ್ಕೆ ಮೂರನೇ ಎರಡರಷ್ಟು ಬಹುಮತದ ಅಗತ್ಯವಿತ್ತು. ಆದರೆ, ಲೋಕಸಭೆಯ 543 ಸದಸ್ಯರ ಪೈಕಿ 489 ಸದಸ್ಯರು (54 ಸದಸ್ಯರು ಅನುಪಸ್ಥಿತಿ) ಮತದಾನದಲ್ಲಿ ಪಾಲ್ಗೊಂಡಿದ್ದರು. ಮಸೂದೆಯ ಪರವಾಗಿ 298 ಸದಸ್ಯರು ಮತ ಚಲಾಯಿಸಿದರೆ, ವಿರುದ್ಧವಾಗಿ 230 ಸದಸ್ಯರು ಚಲಾಯಿಸಿ ದರು. ಕೊನೆಗೆ 54 ಮತಗಳ ಕೊರತೆಯಿಂದ ಮಸೂದೆಗೆ ಸೋಲಾಯಿತು. ಹೀಗಾಗಿ ಕಲಾಪವನ್ನು ಶನಿವಾರಕ್ಕೆ ಮುಂದೂ ಡಲಾಯಿತು.

ಲೋಕಸಭೆಯಲ್ಲಿ ಸೀಮಾ ನಿರ್ಣಯ ಮತ್ತು ಸ್ಥಾನಗಳ ಸಂಖ್ಯೆಯನ್ನು ಹೆಚ್ಚಿಸುವ ಮಸೂದೆ ಸೇರಿ ಇತರೆ ಎರಡು ಮಸೂದೆಗಳನ್ನು ಮೊದಲನೆಯ ಮಸೂದೆ ಸೋತ ನಂತರ ಉಳಿದೆರಡು ಮಸೂದೆಗಳನ್ನು ಮತಕ್ಕೆ ಹಾಕಲಿಲ್ಲ. ಕೇಂದ್ರ ಸರ್ಕಾರವು ಮಹಿಳಾ ಮೀಸಲಾತಿಗೆ ಸಂಬಂಧಿಸಿದ ಮಸೂದೆಗೆ ಈ ಎರಡು ಮಸೂದೆಗಳು ಆಂತರಿಕವಾಗಿ ಸಂಬಂಧಿಸಿದೆ ಎಂದು ಹೇಳಿದೆ. ಹೀಗಾಗಿ, ಒಂದು ಮಸೂದೆಯನ್ನು ಮಾತ್ರ ಮತಕ್ಕೆ ಪ್ರಸ್ತಾಪಿಸಲಾಯಿತು. ಅದರಿಂದಾಗಿ ಮೂರೂ ಮಸೂದೆಗಳು ಬಹುಮತ ಪಡೆಯಲು ವಿಫಲವಾದಂತಾಗಿದೆ.

ಪ್ರಸ್ತುತ, ಲೋಕಸಭೆಯಲ್ಲಿ 540 ಸಂಸದರಿದ್ದಾರೆ. ಮೂರು ಸ್ಥಾನಗಳು ಖಾಲಿ ಇವೆ. ಈ ಮಸೂದೆಯು ಲೋಕಸಭೆಯಲ್ಲಿ ಅನುಮೋದನೆ ಪಡೆಯಲು 360 ಸಂಸದರು ಅದರ ಪರವಾಗಿ ಮತ ಚಲಾಯಿಸಬೇಕಾಗಿತ್ತು. ಎನ್‌ಡಿಎಗೆ ಅಗತ್ಯವಾದ ಸಂಖ್ಯಾಬಲವಿಲ್ಲದ ಕಾರಣ ದಿಂದ ಈ ಮಸೂದೆಯನ್ನು ಅಂಗೀಕರಿಸಲು ಕಾಂಗ್ರೆಸ್ ಅಥವಾ ಇತರೆ ಇಂಡಿಯಾ ಬ್ಲಾಕ್ ಪಕ್ಷಗಳ ಸಹಾಯದ ಅಗತ್ಯವಿತ್ತು. ಹೀಗಾಗಿ ಪ್ರಧಾನಿ ಮೋದಿ ಈ ಮಸೂದೆಗಳನ್ನು ಒಗ್ಗಟ್ಟಾಗಿ ಅಂಗೀಕರಿಸಲು ಮತ ಚಲಾಯಿಸಲು ಮನವಿ ಮಾಡಿದ್ದರು.

## ವಿಪಕ್ಷಗಳ ಮೈತ್ರಿಕೂಟ ವಿರೋಧ : ಎನ್‌ಡಿಎಗೆ ಹಿನ್ನಡೆ



### ಇಂದಲ್ಲ ನಾಳೆ ಜಾರಿ ಮಾಡುತ್ತೇವೆ: ಶಪಥ

ವಿಪಕ್ಷಗಳ ಹಠ, ಅಸಹಕಾರದಿಂದಲೇ ಸೋಲಾಗಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಕಿಡಿಕಾರಿದರು. ಮಸೂದೆ ಸೋಲುತ್ತಿದ್ದಂತೆಯೇ ಸಂಸತ್‌ನ ಹೊರಭಾಗದಲ್ಲಿ ಎನ್‌ಡಿಎ ಸಂಸದರು ಪ್ರತಿಭಟನೆ ನಡೆಸಿದರು. ವಿಪಕ್ಷಗಳ ವಿರುದ್ಧ ಧಿಕ್ಕಾರ ಕೂಗಿದರು. ವಿಪಕ್ಷಗಳು ಮಹಿಳಾ ವಿರೋಧಿಗಳು ಎಂದು ಆಕ್ರೋಶ ಹೊರ ಹಾಕಿದರು. ಈ ಮಧ್ಯೆ, ಮಹಿಳಾ ಮೀಸಲಾತಿ ಮಸೂದೆಯನ್ನು ಇಂದಲ್ಲ ನಾಳೆ ಜಾರಿ ಮಾಡಿಯೇ ತೀರುತ್ತೇವೆಂದು ಎನ್‌ಡಿಎ ಸಂಸದರು ಶಪಥ ಮಾಡಿದ್ದಾರೆ.

### ಪ್ರಮುಖಾಂಶಗಳು

- ಅಂಗೀಕರಿಸಲು ಬೇಕಿದ್ದ ಮತ–352
- ಮಸೂದೆ ಪರ–298
- ಮಸೂದೆ ವಿರುದ್ಧ –230
- ಮತಗಳ ಕೊರತೆ–54

### ಕಾಯ್ದೆಗೂ ಮೀಸಲಾತಿಗೂ ಸಂಬಂಧವಿಲ್ಲ: ರಾಹುಲ್



ಸಂವಿಧಾನ ತಿದ್ದುಪಡಿ ಮಸೂದೆಗೂ ಮಹಿಳಾ ಮೀಸಲಾತಿಗೂ ಯಾವುದೇ ಸಂಬಂಧವಿಲ್ಲ. ಅಧಿಕಾರ ಉಳಿಸಿಕೊಳ್ಳಲು ದುರುದ್ದೇಶದಿಂದ ದೇಶದ ಚುನಾವಣಾ ನಕ್ಷೆಯನ್ನೇ ಬದಲಾಯಿ ಸುವ ಯತ್ನ ಇದಾಗಿದೆ. ಇದು ರಾಷ್ಟ್ರ ವಿರೋಧಿ ಕೃತ್ಯ ಎಂದು ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಆರೋಪಿಸಿದ್ದಾರೆ. ಮಹಿಳಾ ಮೀಸಲಾತಿ ಕಾನೂನಿಗೆ ತಿದ್ದುಪಡಿ ಮತ್ತು ಕ್ಷೇತ್ರ ಪುನರ್ ವಿಂಗಡಣಾ ಆಯೋಗ ರಚನೆಗೆ ಸಂಬಂಧಿಸಿದಂತೆ ಮೂರು ತಿದ್ದುಪಡಿ ಮಸೂದೆಗಳ ಚರ್ಚೆಯಲ್ಲಿ ಮಾತನಾಡಿದ ಅವರು, ಕೇಂದ್ರದ ಪ್ರಸ್ತಾವನೆಯು ಮಹಿಳೆಯರನ್ನು ಸಬಲೀಕರಣಗೊಳಿಸುವುದಿಲ್ಲ. ಸರ್ಕಾರವು 2023ರ ಮಹಿಳಾ ಮೀಸಲಾತಿ ಕಾಯ್ದೆಯನ್ನು ಜಾರಿಗೆ ತರಬೇಕೆಂದ ರಾಹುಲ್ ಗಾಂಧಿ, ಅದಕ್ಕೆ ವಿರೋಧ ಪಕ್ಷದ ಸಂಪೂರ್ಣ ಬೆಂಬಲವಿದೆ. ಜಾತಿ ಜನಗಣತಿಯ ಬೈಪಾಸ್ ಮಾಡುವ ಯತ್ನ ಇದಾಗಿದೆ. ನನ್ನ ಒಬಿಸಿ ಸಹೋದರ, ಸಹೋದರಿಯರಿಗೆ ಅಧಿಕಾರ, ಪ್ರಾತಿನಿಧ್ಯ ನೀಡುವುದನ್ನು ತಪ್ಪಿಸಲು, ಅಧಿಕಾರ ಕಸಿದು ಕೊಳ್ಳಲು ಪ್ರಯತ್ನಿಸುತ್ತಿದ್ದಾರೆಂದು ಆರೋಪಿಸಿದರು.


## ಶಾಸಕ ವಿನಯ್ ಕುಲಕರ್ಣಿಗೆ ಜೀವಾವಧಿ ಶಿಕ್ಷೆ

• ಪ್ರಜೋದಯ ವರದಿ

**ಬೆಂಗಳೂರು:** ಧಾರವಾಡ ಜಿಲ್ಲಾ ಪಂಚಾಯಿತಿ ಬಿಜೆಪಿ ಸದಸ್ಯ ಯೋಗೇಶ್ ಗೌಡ ಹತ್ಯೆ ಪ್ರಕರಣದಲ್ಲಿ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಸೇರಿ 16 ಆರೋಪಿಗಳಿಗೆ ಜೀವಾವಧಿ ಶಿಕ್ಷೆ ವಿಧಿಸಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಶುಕ್ರವಾರ ತೀರ್ಪು ಪ್ರಕಟಿಸಿದೆ.

ಶಾಸಕ ವಿನಯ್ ಕುಲಕರ್ಣಿ ಸೇರಿ ಆರೋಪಿಗಳೆಲ್ಲರೂ ದೋಷಿಗಳೆಂದು ನ್ಯಾಯಾಲಯ ತೀರ್ಪು ನೀಡಿದ ಬೆನ್ನಲ್ಲೇ ಸಿಬಿಐ ವಿನಯ್ ಕುಲಕರ್ಣಿ ಅವರನ್ನು ವಶಕ್ಕೆ ಪಡೆದುಕೊಂಡಿತ್ತು. ಗುರುವಾರ ಸುದೀರ್ಘ ವಿಚಾರಣೆ ನಡೆಸಿದ್ದ ನ್ಯಾಯಾಲಯ ಶುಕ್ರವಾರಕ್ಕೆ ಅಂತಿಮ ತೀರ್ಪು ಪ್ರಕಟಿಸುವುದಾಗಿ ಹೇಳಿತ್ತು.

ಸಿಬಿಐ ತನಿಖೆ ನಡೆಸಿ ಆರೋಪಿಗಳ ವಿರುದ್ಧ ಐಪಿಸಿ ಸೆಕ್ಷನ್ 120(ಬಿ) 302, 217, 201, 143, 147, 148 ಹಾಕಿತ್ತು. ಅಷ್ಟೇ ಅಲ್ಲದೆ 149, ಶಸ್ತ್ರಾಸ್ತ್ರ ಕಾಯ್ದೆ ಸೆಕ್ಷನ್ 25 ಮಾತ್ರವಲ್ಲದೆ, 3, 5, 8, 29 ಮತ್ತು ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ ಸೆಕ್ಷನ್ 13(2) ದಾಖಲಾಗಿತ್ತು. ಜೀವವಾಧಿ ಶಿಕ್ಷೆಯ ಆದೇಶದಿಂದಾಗಿ ಜನಪ್ರತಿನಿಧಿಗಳ ಕಾಯ್ದೆಯ ಸೆಕ್ಷನ್ 8(4)ರ ಪ್ರಕಾರ ವಿನಯ್ ಕುಲಕರ್ಣಿ ಶಾಸಕ ಸ್ಥಾನ ರದ್ದಾಗಿದೆ.



**16 ಲಕ್ಷ ರೂ. ಪರಿಹಾರಕ್ಕೆ ಸೂಚನೆ**

ಕೊಲೆಯಾದ ಯೋಗೇಶ್ ಗೌಡ ಕುಟುಂಬಕ್ಕೆ 16 ಲಕ್ಷ ಪರಿಹಾರ ನೀಡುವಂತೆ ನ್ಯಾಯಾಲಯ ಸೂಚಿಸಿದೆ. ಇನ್ನು 17ನೇ ಆರೋಪಿ ಚನ್ನಕೇಶವ ಟಿಂಗರಿಕರ್‌ಗೆ (ಪೊಲೀಸ್ ಇನ್ಸ್‌ಪೆಕ್ಟರ್) 7 ವರ್ಷ ಜೈಲು ಶಿಕ್ಷೆ ವಿಧಿಸಲಾಗಿದೆ. ಪ್ರತಿ ಸೆಕ್ಷನ್‌ಗೂ ಪ್ರತ್ಯೇಕವಾಗಿ ದಂಡವನ್ನು ಕೋರ್ಟ್ ವಿಧಿಸಿದೆ. ಅಲ್ಲದೆ, ಎ 1 ಆರೋಪಿ ಮುತ್ತಗಿಗೆ ಮಾಫಿ ಸಾಕ್ಷಿ ಸ್ಥಾನವನ್ನು ಕೋರ್ಟ್ ಖಚಿತಪಡಿಸಿದೆ.

ಶಿಕ್ಷೆಗೆ ಗುರಿಯಾದವರು: ವಿಕ್ರಂ, ಕೀರ್ತಿಕುಮಾರ್, ಸಂದೀಪ್, ವಿನಾಯಕ, ಮಹಾಬಲೇಶ್ವರ, ಸಂತೋಷ, ದಿನೇಶ್, ಅಶ್ವಥ್, ಸುನೀಲ್, ನಜೀರ್ ಅಹ್ಮದ್, ಶಾನವಾಝ್, ನೂತನ್, ಹರ್ಷಿತ್, ವಿನಯ ಕುಲಕರ್ಣಿ (ಎ 15), ಚಂದ್ರಶೇಖರ್ ಇಂಡಿ, ವಿಕಾಸ್ ಕಲಬುರಗಿ. ವೈಯಕ್ತಿಕ, ರಾಜಕೀಯ ದ್ವೇಷದ ಹಿನ್ನಲೆಯಲ್ಲಿ 2016ರ ಜೂನ್‌ನಲ್ಲಿ ಯೋಗೇಶ್ ಗೌಡ ಕೊಲೆ ನಡೆದಿತ್ತು. 10 ವರ್ಷಗಳ ಸುದೀರ್ಘ ವಿಚಾರಣೆ ಬಳಿಕ ತೀರ್ಪು ಪ್ರಕಟವಾಗಿದೆ.

## ಒಂಟಿ ಕೋರೆ ಪುಂಡಾನೆ ಸೆರೆ ಕಾರ್ಯಾಚರಣೆ ವಿಫಲ

• ಪ್ರಜೋದಯ ವರದಿ

- ಸಾಕಾನೆಗಳನ್ನೇ ಅಲೆದಾಡಿಸಿದ ಸಲಗ
- ಸುಗ್ರೀವ, ಲಕ್ಷ್ಮಣನ ಬದಲು ಭೀಮ, ಶ್ರೀಕಂಠ ಭಾಗಿ

**ಬೇಲೂರು:** ಸೆರೆ ಸಿಕ್ಕ ವೇಳೆ ಸಾಕಾನೆಗಳೊಂದಿಗೆ ಕಾಳಗ ನಡೆಸಿ ಪರಾರಿಯಾಗಿದ್ದ ಒಂಟಿ ಕೋರೆಯ ಪುಂಡಾನೆಯನ್ನು ಸೆರೆ ಹಿಡಿಯಲು ಅರಣ್ಯ ಇಲಾಖೆ ಶುಕ್ರವಾರ ಕೈಗೊಂಡ ಕಾರ್ಯಾಚರಣೆ ವಿಫಲಗೊಂಡು, ಶನಿವಾರವೂ ಮುಂದುವರೆಸಲು ನಿರ್ಧರಿಸಲಾಗಿದೆ.

ವೃದ್ಧನನ್ನು ಬಲಿ ಪಡೆದ ಕಾಡಾನೆಯನ್ನು ಸೆರೆ ಹಿಡಿಯುವಂತೆ ಸ್ಥಳೀಯರಿಂದ ಒತ್ತಾಯ ಕೇಳಿ ಬಂದ ಹಿನ್ನಲೆಯಲ್ಲಿ ಬುಧವಾರ ತಾಲ್ಲೂಕಿನ ಚೀಕನಹಳ್ಳಿ ಭಾಗದಲ್ಲಿ ಕಾರ್ಯಾಚರಣೆ ನಡೆಸಿ ಸೆರೆ ಹಿಡಿಯಲಾಗಿತ್ತು. ಆದರೆ, ಸಾಕಾನೆಗಳೊಂದಿಗೆ ಕಾಳಗ ನಡೆಸಿ ತಪ್ಪಿಸಿಕೊಂಡು ಪರಾರಿಯಾಗಿತ್ತು. ಕಾರ್ಯಾಚರಣೆ ನೇತೃತ್ವ ವಹಿಸಿಕೊಂಡಿದ್ದ ಸಾಕಾನೆ ಸುಗ್ರೀವ ಗುರುವಾರ ಕಾವಾಡಿಗ ರಾಜು ಮೇಲೆ ದಾಳಿ ನಡೆಸಿ, ಗಂಭೀರವಾಗಿ ಗಾಯಗೊಳಿಸಿದ್ದರಿಂದ ಕಾರ್ಯಾಚರಣೆಯನ್ನು ಒಂದು ದಿನದ ಮಟ್ಟಿಗೆ ಸ್ಥಗಿತಗೊಳಿಸಲಾಗಿತ್ತು.

ಸುಗ್ರೀವ ಹಾಗು ಲಕ್ಷ್ಮಣ ಆನೆಯನ್ನು ವಾಪಾಸ್ ಶಿಬಿರಕ್ಕೆ ಕಳುಹಿಸಿ, ಅವುಗಳ ಬದಲಿಗೆ ಕರ್ನಾಟಕದ ಭೀಮ ಮತ್ತು ಶ್ರೀಕಂಠ ಕುಮ್ಕಿ ಆನೆಗಳನ್ನು ಕರೆಸಿಕೊಂಡು, ಶುಕ್ರವಾರ ಧನಂಜಯ, ಅಯ್ಯಪ್ಪ, ಶ್ರೀರಾಮ ಮತ್ತು ಹರ್ಷನ ನೆರವಿನೊಂದಿಗೆ ಕಾರ್ಯಾಚರಣೆಗೆ ಇಳಿಯಲಾಯಿತು. ಈ ವೇಳೆ ಕಾಡಾನೆ ಒಂದು ಕಡೆ ನಿಲ್ಲದೆ ನಿರಂತರವಾಗಿ ಓಡಾಡುತ್ತಿದ್ದರಿಂದ ಕಾರ್ಯಾಚರಣೆಗೆ ಅಡಚಣೆ ಉಂಟಾಯಿತು. ಕಾರ್ಯಾಚರಣೆ ಆರಂಭವಾಗುತ್ತಿದ್ದಂತೆ ಪುಂಡಾನೆ ತಾಲ್ಲೂಕಿನ ಚೀಕನಹಳ್ಳಿ ಗ್ರಾಮದಿಂದ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕಿನ ಹೊಸ್ಪುರ ಗ್ರಾಮದತ್ತ ವೇಗವಾಗಿ ಚಲಿಸಿ ತಂಡಕ್ಕೆ ಸವಾಲೊಡ್ಡಿತು. ನಂತರ ಮಧ್ಯಾಹ್ನದ ವೇಳೆಗೆ ಮೂಡಿಗೆರೆ ತಾಲ್ಲೂಕಿನ ಗೋಣಿಬೀಡು ಭಾಗದಲ್ಲಿ ಕಾಣಿಸಿಕೊಂಡಿತು.

ಅರಣ್ಯ ಮತ್ತು ಇಟಿಎಫ್ ಸಿಬ್ಬಂದಿ ಕುಮ್ಕಿ ಆನೆಗಳ ಸಹಾಯದಿಂದ ಕಾಡಾನೆಯನ್ನು ಬೆನ್ನಟ್ಟಿದರೂ ಕಾಫಿ ತೋಟಗಳ ಮಧ್ಯೆ ನುಸುಳಿ ಓಡಾಡುತ್ತಿದ್ದ ಕಾಡಾನೆ ತನ್ನ ಚಾಣಾಕ್ಷತನದಿಂದ ತಂಡದ ಕಣ್ತಪ್ಪಿಸುತ್ತಲೇ ಇತ್ತು. ಪುಂಡಾನೆಗೆ ಅರಿವಳಿಕೆ ಚುಚ್ಚುಮದ್ದು ನೀಡಲು ವೈದ್ಯರು ಹಲವು ಬಾರಿ ಪ್ರಯತ್ನಿಸಿದರೂ, ಆನೆ ವೇಗವಾಗಿ ಚಲಿಸುತ್ತಿದ್ದರಿಂದ ಚುಚ್ಚುಮದ್ದು ತಗುಲದೆ ವಿಫಲವಾಯಿತು.

ಸತತ ಆರು ಗಂಟೆಗಳ ಕಾರ್ಯಾಚರಣೆಯ ಬಳಿಕ ಸಂಜೆ 6ಗಂಟೆ ಸುಮಾರಿಗೆ ಕಾಡಾನೆಯನ್ನು ಸೆರೆ ಹಿಡಿಯಲು ಸಾಧ್ಯವಾಗದೆ ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಯಿತು. ಸಂಜೆ ನಂತರ ಕಾಡಾನೆಯು ಬೇಲೂರು ಕಡೆಗೆ ಹೆಜ್ಜೆ ಹಾಕಿದ ಮಾಹಿತಿಯನ್ನು ಅರಣ್ಯ ಇಲಾಖೆ ತಂಡವು ಸಂಗ್ರಹಿಸಿದೆ. ಕಾರ್ಯಾಚರಣೆ ವಿಫಲವಾದ್ದರಿಂದ ಆರು ಕುಮ್ಕಿ ಆನೆಗಳನ್ನು ಬಿಕ್ಕೋಡು ಗ್ರಾಮದ ತಾತ್ಕಾಲಿಕ ಶಿಬಿರಕ್ಕೆ ವಾಪಾಸ್ ಕರೆದೊಯ್ಯಲಾಯಿತು. ಶನಿವಾರ ಮೂರನೇ ದಿನವೂ ಕಾರ್ಯಾಚರಣೆ ಮುಂದುವರಿಸಲಾಗುವುದೆಂದು ಅರಣ್ಯ ಇಲಾಖೆ ತಿಳಿಸಿದೆ. ಡಿಸಿಎಫ್ ಸೌರಭ್ ಕುಮಾರ್ ಅವರ ನೇತೃತ್ವದ ತಂಡ ಕಾರ್ಯ ನಿರ್ವಹಿಸಿತು.



### ಒಂದು ಆನೆ ಸೆರೆ, ಎರಡಕ್ಕೆ ರೇಡಿಯೋ ಕಾಲರ್

ನಿರಂತರ ಉಪಟಳ ನೀಡುತ್ತಿರುವ ಹಾಗು ಮಾನವ ಜೀವಕ್ಕೆ ಹಾನಿ ಉಂಟು ಮಾಡುತ್ತಿರುವ ಗಂಡಾನೆ ಒಂದನ್ನು ಸೆರೆ ಹಿಡಿದು ಸ್ಥಳಾಂತರಿಸುವುದು ಹಾಗು ಎರಡು ಹೆಣ್ಣಾನೆಗಳಿಗೆ ರೇಡಿಯೋ ಕಾಲರ್ ಅಳವಡಿಸುವ ಕಾರ್ಯಾಚರಣೆಯನ್ನು ಅರಣ್ಯ ಇಲಾಖೆ ಹಮ್ಮಿಕೊಂಡಿದೆ. ಇದರ ಭಾಗವಾಗಿ ನಡೆಯುತ್ತಿರುವ ಒಂಟಿಕೋರೆ ಕಾಡಾನೆ ಸೆರೆ ಕಾರ್ಯಾಚರಣೆ ಎರಡನೇ ದಿನವೂ ವಿಫಲಗೊಂಡಿದೆ.

## ಅಬ್ಬೂರು ಮಾಚಗೋಡನಹಳ್ಳಿಯಲ್ಲಿ ಡಿಸಿ ಸಂಚಾರ

### ಶೆಡ್ ತೆರವು ಜಾಗ ಪರಿಶೀಲನೆ | ಸಮಸ್ಯೆಗೆ ಪರಿಹಾರ ಸಿಗುವ ಭರವಸೆ

• ಪ್ರಜೋದಯ ವರದಿ

**ಅರಕಲಗೂಡು:** ತಾಲ್ಲೂಕಿನ ಅಬ್ಬೂರು ಮಾಚಗೋಡನಹಳ್ಳಿಗೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಅಧಿಕಾರಿಗಳೊಂದಿಗೆ ಶುಕ್ರವಾರ ಭೇಟಿ ನೀಡಿ ಗ್ರಾಮದಲ್ಲಿ ತಾಲ್ಲೂಕು ಆಡಳಿತ ಕೈಗೊಂಡಿರುವ ಅನಧಿಕೃತ ಶೆಡ್ ತೆರವು ಕಾರ್ಯಾಚರಣೆ ಕುರಿತು ನಿವಾಸಿಗಳೊಂದಿಗೆ ಸಮಾಲೋಚನೆ ನಡೆಸಿದರು.

ಸರ್ಕಾರಿ ಗೋಮಾಳ ಜಾಗದಲ್ಲಿ ಅನಧಿಕೃತ ಶೆಡ್‌ಗಳನ್ನು ತೆರವುಗೊಳಿಸಿರುವ ಸ್ಥಳ ಹಾಗು ಉಳಿಕೆ ಗೋಮಾಳ ಜಮೀನನ್ನು ವೀಕ್ಷಣೆ ಮಾಡಿದ ಅವರು, ಜಾಗಕ್ಕೆ ಸಂಬಂಧಪಟ್ಟ ತಕರಾರು ಹಾಗು ಹಕ್ಕು ಪತ್ರ ಹೊಂದಿರುವವರನ್ನು ಪ್ರತ್ಯೇಕವಾಗಿ ಆಹ್ವಾನಿಸಿ ಅಹವಾಲು ಕೂಡ ಆಲಿಸಿದರು. ಅದಾದ ಬಳಿಕ ಸರ್ಕಾರಿ ಪ್ರೌಢಶಾಲಾ ಆವರಣಕ್ಕೆ ತೆರಳಿ ಗ್ರಾಮಸ್ಥರೊಂದಿಗೆ ಸಮಸ್ಯೆ ಕುರಿತು ಚರ್ಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಮಕ್ಕೆ ಅಧಿಕಾರಿಗಳು ಬಂದು ಸಭೆ ನಡೆಸಿ ಹೋಗಬಹುದು. ಅಂತಿಮವಾಗಿ ವಾಸ ಮಾಡುವ ಜನರು ಹೊಂದಿಕೊಂಡು ಹೋಗುವ ಕೆಲಸ ನಿಮ್ಮದೇ ಆಗಿರುತ್ತದೆ. ತುಂಬಾ ಪ್ರಬುದ್ಧತೆಯಿಂದ ನಡೆದುಕೊಳ್ಳಬೇಕಿದೆ ಹಾಗು ಊರು, ಜನರ ಬಗ್ಗೆ ಕಳಕಳಿ ಸಹ ಇರಬೇಕಾಗುತ್ತದೆ. ಇಲ್ಲಿನ ಎಲ್ಲಾ ಸಮಸ್ಯೆಗೆ ಪರಿಹಾರ ಕೂಡ ಕಂಡುಕೊಳ್ಳಬೇಕಿದೆ. ಗ್ರಾಮದಲ್ಲಿ ಉಂಟಾಗಿರುವ ಸಮಸ್ಯೆಯನ್ನು ಖುದ್ದು ಪರಿಶೀಲನೆ ನಡೆಸಿ ಪ್ರತ್ಯೇಕವಾಗಿ ಆಲಿಸಿದ್ದೇನೆ. ಅರ್ಹರಿಗೆ ತೊಂದರೆ ಆಗುವ ಸಾಧ್ಯತೆ ಇಲ್ಲ. ಕೂಡಲೇ ತಾಲ್ಲೂಕು ಕಚೇರಿಗೆ ತೆರಳಿ ಸರ್ವೆ ನಂ. 94ರ ಸರ್ಕಾರಿ ಗೋಮಾಳ ಮಂಜೂರಾತಿ, ಹಾಲಿ ಅನುಭವದಲ್ಲಿರುವವರ ಬಗ್ಗೆ ಪರಿಶೀಲನೆ ನಡೆಸಿ ಈ ಹಿಂದೆ ಗ್ರಾಮ ಠಾಣೆಗೆ ಮೀಸಲಿಟ್ಟಿರುವ ಜಾಗದ ಬಗ್ಗೆಯೂ ಕೂಡ ಕಂದಾಯ ದಾಖಲೆಗಳನ್ನು ಖಾತ್ರಿ ಮಾಡುವ ಜೊತೆಗೆ ನ್ಯಾಯಯುತವಾಗಿ ಸಮಸ್ಯೆಗೆ ಪರಿಹಾರ ದೊರಕಿಸುವ ವಿಶ್ವಾಸ ಇಲ್ಲಿಗೆ ಭೇಟಿ ನೀಡಿದ ವೇಳೆ ಕಂಡು ಬಂದಿದೆ ಎಂದರು.

ಅಬ್ಬೂರು, ಮಾಚಗೋಡನಹಳ್ಳಿ ಗ್ರಾಮದ ಸರ್ಕಾರಿ ಗೋಮಾಳ ಜಮೀನಿನ ದಾಖಲೆಯನ್ನು ಪರಿಶೀಲಿಸಿ, ಈ ಹಿಂದೆ ಆಗಿರುವ ಮತ್ತು ಮುಂದೆ ಆಗಬೇಕಿರುವ ಕಾನೂನಾತ್ಮಕ ಕ್ರಮವನ್ನು ಕೈಗೊಳ್ಳಬೇಕಿದೆ. ಮೊದಲು ಗ್ರಾಮದಲ್ಲಿ ಶಾಂತಿ ಸುವ್ಯವಸ್ಥೆ ಮೂಡಬೇಕಿದೆ. ಈ ಹಂತದಲ್ಲಿ ಯಾರು ಕೂಡ ಕಾನೂನು ಉಲ್ಲಂಘನೆಯಾಗದ ರೀತಿ ನಡೆದುಕೊಳ್ಳಬೇಕೆಂದು ಅವರು ನಿವಾಸಿಗಳಿಗೆ ತಿಳಿ ಹೇಳಿದರು.

ಗ್ರಾಮದ ಹಲವರಿಗೆ 35 ವರ್ಷಗಳ ಹಿಂದೆ ಹಕ್ಕುಪತ್ರ ನೀಡಿರುವ ಕುರಿತು ಮಾಹಿತಿ ಲಭ್ಯವಾಗಿದೆ. ಆದರೆ, ಆರೇಳು ತಿಂಗಳಿನಿಂದ ಸಮಸ್ಯೆ ಉಂಟಾಗಿದೆ. ಏಕೆ ಇಷ್ಟು ವರ್ಷ ಹಕ್ಕು ಪತ್ರ ಪಡೆದು ಸುಮ್ಮನಿದ್ದೀರಿ. ಇಷ್ಟು ವರ್ಷ ಸುಮ್ಮನಿರುವ ನಿಮಗೆ ಒಂದಷ್ಟು ದಿನ ಇರಲು ಆಗುವುದಿಲ್ಲವೇ. ನಿಮ್ಮ ಮನವಿ ಮೇರೆಗೆ ಉಪವಿಭಾಗಾಧಿಕಾರಿ, ತಹಶೀಲ್ದಾರ್ ಅವರಿಗೆ ಸೂಚನೆ ನೀಡಿ ಪರಿಶೀಲನೆ ಮಾಡಿ ವರದಿ ನೀಡುವಂತೆ ತಿಳಿಸಿದ್ದೇನೆ. ಮತ್ತೆ ಗೋಮಾಳ ಜಮೀನಿಗೆ ಅರ್ಜಿ ಸಲ್ಲಿಸಿ ಉಳುಮೆ ಮಾಡಿಕೊಂಡು ಸಹ ಬರುತ್ತಿದ್ದಾರೆ. ಅದನ್ನು ಸಹ ಪರಿಶೀಲನೆ ಮಾಡಬೇಕಿದೆ ಎಂದು ಜನರಿಗೆ ಮನವರಿಕೆ ಮಾಡಿದರು.


» ನಾಲ್ಕನೇ ಪುಟದಲ್ಲಿ



## ವಿದ್ಯಾರ್ಥಿ ವೇತನ ಬಿಡುಗಡೆಗೆ ಆಗ್ರಹಿಸಿ ಎಬಿವಿಪಿ ಪ್ರತಿಭಟನೆ

• ಪ್ರಜೋದಯ ವರದಿ

ಹಾಸನ: ರಾಜ್ಯ ಸರ್ಕಾರ ವಿದ್ಯಾರ್ಥಿ ವೇತನ ಪಾವತಿಸದೆ ವ್ಯಾಸಂಗಕ್ಕೆ ಕೊಡಲಿ ಪೆಟ್ಟು ನೀಡುತ್ತಿದೆ ಎಂದು ಆರೋಪಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ಕಾರ್ಯಕರ್ತರು ಶುಕ್ರವಾರ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.



ನಗರದ ಹೇಮಾವತಿ ಪ್ರತಿಮೆ ಬಳಿಯಿಂದ ಮೆರವಣಿಗೆಯಲ್ಲಿ ಬಂದ ಪ್ರತಿಭಟನಾಕಾರರು ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದರು. ಎಸ್‌ಎಸ್‌ಪಿ ತಂತ್ರಾಂಶದ ಮೂಲಕ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕೃಷಿ, ಸಮಾಜ ಕಲ್ಯಾಣ, ಆಯುಷ್, ತಾಂತ್ರಿಕ ಶಿಕ್ಷಣ ಹಾಗು ವಿವಿಧ ಇಲಾಖೆಯಡಿ ಲಕ್ಷಾಂತರ ವಿದ್ಯಾರ್ಥಿಗಳು ತಮ್ಮ ಪದವಿ ಮತ್ತು ಸ್ನಾತಕೋತ್ತರ ಶಿಕ್ಷಣಕ್ಕಾಗಿ ವಿದ್ಯಾರ್ಥಿ ವೇತನ ಅರ್ಜಿ ಸಲ್ಲಿಸಿದ್ದಾರೆ. ಆದರೆ, ರಾಜ್ಯ ಸರ್ಕಾರ ಸಮಯಕ್ಕೆ ಸರಿಯಾಗಿ ಹಣ ಬಿಡುಗಡೆ ಮಾಡದೆ ಭವಿಷ್ಯವನ್ನು ಸಂಕಷ್ಟಕ್ಕೆ ದೂಡುತ್ತಿದೆ ಎಂದು ಆರೋಪಿಸಿದರು.

ಆರ್ಥಿಕ ಸಮಸ್ಯೆಯಿಂದ ಎಷ್ಟೋ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ರಾಜ್ಯ ಸರ್ಕಾರ

» ನಾಲ್ಕನೇ ಪುಟದಲ್ಲಿ



ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಶುಕ್ರವಾರ ಚಿಕ್ಕಮಗಳೂರಿಗೆ ತೆರಳುವ ಮಾರ್ಗ ಮಧ್ಯೆ ನಗರಕ್ಕೆ ಆಗಮಿಸಿ ಜಿಲ್ಲಾ ಬಿಜೆಪಿ ಮುಖಂಡರಿಂದ ಸನ್ಮಾನ ಸ್ವೀಕರಿಸಿದರು. ಶಾಸಕ ಸಿಮೆಂಟ್ ಮಂಜು, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ರಾಜಕುಮಾರ್ ಮತ್ತಿತರರು ಹಾಜರಿದ್ದರು.

## ಏ.20 ರಂದು ಬಸವ ಜಯಂತಿ

• ಪ್ರಜೋದಯ ವರದಿ

ಹಾಸನ : ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಏ.20 ರಂದು ಬೆಳಿಗ್ಗೆ 11.30 ಗಂಟೆಗೆ ಬಸವ ಜಯಂತಿ ಕಾರ್ಯಕ್ರಮ ಆಯೋಜಿಸಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಭೈರೇಗೌಡ ಕಾರ್ಯಕ್ರಮ ಉದ್ಘಾಟಿಸುವರು. ರಾಜ್ಯ ಗೃಹ ಮಂಡಳಿಯ ಅಧ್ಯಕ್ಷ ಕೆ.ಎಂ ಶಿವಲಿಂಗೇಗೌಡ ಗೌರವ ಉಪಸ್ಥಿತಿ ವಹಿಸಲಿದ್ದಾರೆ. ಶಾಸಕ ಹೆಚ್.ಪಿ. ಸ್ವರೂಪ್ ಅಧ್ಯಕ್ಷತೆ ವಹಿಸಲಿದ್ದಾರೆ.

ಸಂಸದ ಶ್ರೇಯಸ್ ಪಟೇಲ್, ಮಾಜಿ ಸಚಿವ ಹೆಚ್.ಡಿ ರೇವಣ್ಣ, ಶಾಸಕರಾದ ಸಿ.ಎನ್ .ಬಾಲಕೃಷ್ಣ, ಎ.ಮಂಜು, ಹೆಚ್.ಕೆ ಸುರೇಶ್, ಸಿಮೆಂಟ್ ಮಂಜು, ವಿಧಾನ ಪರಿಷತ್ ಸದಸ್ಯರು ಮುಖ್ಯ ಅತಿಥಿಗಳಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ, ನಿವೃತ್ತ ಪ್ರಾಂಶುಪಾಲ ಟಿ.ಎಂ.ಶಿವಶಂಕರಪ್ಪ ಅವರು ಉಪನ್ಯಾಸ ನೀಡಲಿದ್ದಾರೆ.

ಕಾರ್ಯಕ್ರಮದ ಅಂಗವಾಗಿ ಅಂದು ಬೆಳಿಗ್ಗೆ 9.30ಕ್ಕೆ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಬಸವಣ್ಣರವರ ಭಾವಚಿತ್ರಕ್ಕೆ ಪುಷ್ಪಾರ್ಚನೆಯೊಂದಿಗೆ ಮೆರವಣಿಗೆಗೆ ಚಾಲನೆ ನೀಡಲಾಗುವುದು.

### ಶೆಟ್ಟಿಗೆರೆಯಲ್ಲಿ ಸೂತಕದ ಛಾಯೆ | ಮುಗಿಲು ಮುಟ್ಟಿದ ಸಂಬಂಧಿಕರ ಆಕ್ರಂದನ

## ಅಪಘಾತದಲ್ಲಿ ಸಾವನ್ನಪ್ಪಿದವರ ಸಾಮೂಹಿಕ ಅಂತ್ಯಕ್ರಿಯೆ

• ಪ್ರಜೋದಯ ವರದಿ

**ಬೇಲೂರು :** ಕುಟುಂಬಸ್ಥರೊಂದಿಗೆ ಮಂತ್ರಾಲಯಕ್ಕೆ ತೆರಳುತ್ತಿದ್ದ ವೇಳೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಸಾವನ್ನಪ್ಪಿದ್ದವರ ಮೃತದೇಹಗಳನ್ನು ಸ್ವಗ್ರಾಮ ತಾಲ್ಲೂಕಿನ ಶೆಟ್ಟಿಗೆರೆಗೆ ತಂದು ಶುಕ್ರವಾರ ಅಂತ್ಯಕ್ರಿಯೆ ನಡೆಸಲಾಯಿತು.

ಅಪಘಾತದಲ್ಲಿ ಮೃತಪಟ್ಟವರ ಸಂಖ್ಯೆ 9ಕ್ಕೆ ಏರಿಕೆಯಾಗಿದ್ದು, ಗಂಭೀರವಾಗಿ ಗಾಯಗೊಂಡು ಸಾವು-ಬದುಕಿನ ನಡುವೆ ಹೋರಾಡುತ್ತಿದ್ದ ತೇಜಸ್ವಿನಿ (16) ಕೂಡ ಮೃತಪಟ್ಟಿದ್ದಾಳೆ. ಒಂಬತ್ತು ಜನರ ಮೃತದೇಹಗಳ ಪೈಕಿ, ಬೇಲೂರಿನಲ್ಲಿ 8 ಮಂದಿಯನ್ನು ಹಾಗು ಚಿಕ್ಕಮಗಳೂರು ಜಿಲ್ಲೆಯಲ್ಲಿ ಇಬ್ಬರ ಮೃತದೇಹಗಳನ್ನು ಸಾಮೂಹಿಕವಾಗಿ ಅಂತ್ಯಸಂಸ್ಕಾರ ಮಾಡಲಾಯಿತು. ಈ ವೇಳೆ ಸಂಬಂಧಿಕರು, ಗ್ರಾಮಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು. ಸುತ್ತಮುತ್ತಲಿನ ಗ್ರಾಮಸ್ಥರು ಅಂತಿಮ ದರ್ಶನ ಪಡೆದು ಕಣ್ಣೀರಿಟ್ಟರು.

ಗುರುವಾರ ಮಂತ್ರಾಲಯದ ಸರ್ಕಾರಿ ಆಸ್ಪತ್ರೆಯಲ್ಲಿ ಮರಣೋತ್ತರ ವೈದ್ಯಕೀಯ ಪರೀಕ್ಷೆ ನಂತರ, ಕುಮಾರ್ (51) ಸುನಿಲ್ (27) ಲೋಲಾಕ್ಷಿ (38) ವೀಣಾ(25) ನಿಶಿತ (3) ಜಯಮ್ಮ (61) ಮತ್ತು ತೇಜಸ್ವಿನಿ (16) ಅವರ ಮೃತ ದೇಹಗಳನ್ನು ಶುಕ್ರವಾರ ಸ್ವಗ್ರಾಮ ಶೆಟ್ಟಿಗೆರೆಗೆ ತರಲಾಗಿಯಿತು. ಈ ವೇಳೆ ಶಾಸಕ ಹೆಚ್.ಕೆ.ಸುರೇಶ್, ಉಪ ವಿಭಾಗಾಧಿಕಾರಿ ಹುಲಿಮನಿ ತಿಮ್ಮಣ್ಣ, ಸಿಪಿಐ ರೇವಣ್ಣ ಅಂತಿಮ ದರ್ಶನ ಪಡೆದರು.

ಶಾಸಕ ಹೆಚ್.ಕೆ.ಸುರೇಶ್ ಅವರು, ದುರಂತ ಘಟಿಸಿದ ದಿನದಿಂದಲೂ ಪ್ರತಿ ಮಾಹಿತಿಯನ್ನು ಕಲೆ ಹಾಕಿದ್ದ ಅವರು, ಮೊದಲಿಗೆ ಮಂತ್ರಾಲಯದ ಪೊಲೀಸ್ ಠಾಣೆಗೆ ಸಂಪೂರ್ಣ ಸಹಕಾರ ಕೋರಿ ನಂತರ ಬೇಲೂರಿನಿಂದ ಪಿಎಸ್‌ಐ ಪಾಟೀಲ್ ಅವರನ್ನು ಸ್ಥಳಕ್ಕೆ ಕಳುಹಿಸಿ ಎಲ್ಲಾ ಮಾಹಿತಿ ನೀಡುವ ಮೂಲಕ ಅಲ್ಲಿಂದ ಮೃತದೇಹಗಳನ್ನು ಆ್ಯಂಬುಲೆನ್ಸ್‌ಗಳ ಮೂಲಕ ಗ್ರಾಮಕ್ಕೆ ತರುವ ವ್ಯವಸ್ಥೆ ಮಾಡಿದ್ದರು.

ಈ ಸಂದರ್ಭದಲ್ಲಿ ಅಂತಿಮ ದರ್ಶನ ಪಡೆದು ಮಾತನಾಡಿದ ಅವರು, ತಾಲ್ಲೂಕಿನ 20 ಮಂದಿ ಗೂಡ್ಸ್ ಆಟೋದಲ್ಲಿ ರಾಘವೇಂದ್ರ ಸ್ವಾಮಿ ದರ್ಶನಕ್ಕೆ ತೆರಳುತ್ತಿದ್ದ ಕುಟುಂಬ ದುರ್ಘಟನೆಯಲ್ಲಿ ಏಳು ಮಂದಿ ಸಾವನ್ನಪ್ಪಿದ್ದಾರೆ. ಇದು ಅತ್ಯಂತ ನೋವು ತಂದಿದೆ. ಗಾಯಾಳುಗಳಿಗೆ ಚಿಕಿತ್ಸೆ ಕೊಡಿಸುತ್ತೇನೆ, ಅವರ ಕುಟುಂಬಗಳಿಗೂ ಧೈರ್ಯ ತುಂಬಿದ್ದೇನೆ. ನೊಂದ ಕುಟುಂಬಗಳ ಜೊತೆ ನಾನಿದ್ದು, ಸರ್ಕಾರದ ಗಮನ ಸೆಳೆದು ಮೃತ ಕುಟುಂಬಗಳಿಗೆ ಆರ್ಥಿಕ ಸಹಾಯ ಮಾಡಿಸುತ್ತೇನೆ ಎಂದರು.



**ಗಾಯಾಳುಗಳ ಪರಿಸ್ಥಿತಿ ಅರಿತು ವಿಶೇಷ ಆ್ಯಂಬುಲೆನ್ಸ್ ಮೂಲಕ ಅಲ್ಲಿರುವ 10 ಜನರನ್ನು ಜಿಲ್ಲಾ ಆಸ್ಪತ್ರೆಗೆ ರವಾನಿಸಲು ಸೂಚನೆ ನೀಡಿದ್ದೇನೆ. ನೊಂದಿರುವ ಎಲ್ಲಾ ಕುಟುಂಬಕ್ಕೆ ಚನ್ನಕೇಶವ ಧೈರ್ಯ ತುಂಬಾ ಕೆಲಸ ಮಾಡಲಿ, ಅವರ ಜೊತೆ ನಾನಿರುತ್ತೇನೆ.**

**-ಹೆಚ್.ಕೆ.ಸುರೇಶ್, ಶಾಸಕ**

**ಮುಳುಗಡೆ ಸಂತ್ರಸ್ತರಾಗಿದ್ದ ಕುಟುಂಬ**

ಬೇಲೂರು ಮತ್ತು ಹಳೇಬೀಡು ಭಾಗಗಳಿಗೆ ನೀರುಣಿಸುವ ಸಲುವಾಗಿ ಬೇಲೂರು ತಾಲ್ಲೂಕಿನಲ್ಲಿ ಯಗಚಿ ನದಿಗೆ ಅಡ್ಡಲಾಗಿ, ಯಗಚಿ ಜಲಾಶಯ ನಿರ್ಮಾಣ ಮಾಡಲಾಗಿತ್ತು. ಮೃತ ಕುಟುಂಬಗಳು ವಾಸವಿದ್ದ ಗ್ರಾಮ ಹಿನ್ನೀರಿನಲ್ಲಿ ಮುಳುಗಡೆ ಆಗಿದ್ದರಿಂದ ಸರ್ಕಾರ ಪುನರ್ವಸತಿ ಕಲ್ಪಿಸಿತ್ತು. ನಂತರ ಜಲಾಶಯದ ಮೇಲ್ಭಾಗದ ಶೆಟ್ಟಿಗೆರೆಗೆ ಬಂದು ಹೊಸದಾಗಿ ಬದುಕು ಕಟ್ಟಿಕೊಂಡಿದ್ದರು. ಜೀವನೋಪಾಯಕ್ಕಾಗಿ ಮೀನು ಹಿಡಿಯುವ ವೃತ್ತಿ ಮಾಡಿಕೊಂಡು, ಬದುಕಿನ ಎರಡನೇ ಪಯಣ ಆರಂಭಿಸಿದ್ದರು. ಆದರೆ, ರಾಯರ ದರ್ಶನಕ್ಕೆ ತೆರಳಿದ್ದ ಕುಟುಂಬದವರ ಪೈಕಿ ಏಳು ಮಂದಿ ಬಾರದ ಲೋಕಕ್ಕೆ ಪಯಣಿಸುವ ಮೂಲಕ ಯಾತ್ರೆ ಮುಗಿಸಿದ್ದಾರೆ.


### ಸಾವಿನ ಸಂಖ್ಯೆ 9ಕ್ಕೆ ಏರಿಕೆ

ಅಪಘಾತದಲ್ಲಿ ಮೃತಪಟ್ಟವರ ಸಂಖ್ಯೆ 9ಕ್ಕೆ ಏರಿಕೆಯಾಗಿದ್ದು, ಗಂಭೀರವಾಗಿ ಗಾಯಗೊಂಡಿದ್ದ ಬಾಲಕಿ ತೇಜಸ್ವಿನಿ (16) ಶುಕ್ರವಾರ ಚಿಕಿತ್ಸೆಗೆ ಸ್ಪಂದಿಸದೆ ಸಾವನ್ನಪ್ಪಿದ್ದಾರೆ. ತೇಜಸ್ವಿನಿ, ಮೃತ ಲೋಲಾಕ್ಷಿ ಅವರ ಪುತ್ರಿಯಾಗಿದ್ದಾರೆ. ಈ ದುರ್ಘಟನೆಯಲ್ಲಿ ತಾಲ್ಲೂಕಿನ ಶೆಟ್ಟಿಗೆರೆ ಗ್ರಾಮದ ಒಂದೇ ಕುಟುಂಬದ ಒಟ್ಟು 7 ಮಂದಿ ಬಲಿಯಾಗಿದೆ. ಈ ದಾರುಣ ಘಟನೆ ಸ್ಥಳೀಯರು ಮತ್ತು ಗ್ರಾಮಸ್ಥರಲ್ಲಿ ಸೂತಕದ ಛಾಯೆ ಆವರಿಸುವಂತೆ ಮಾಡಿದೆ.

## ವ್ಯಕ್ತಿ ಆತ್ಮಹತ್ಯೆ

• ಪ್ರಜೋದಯ ವರದಿ

**ಹಾಸನ:** ಕೌಟುಂಬಿಕ ಕಲಹ ಹಿನ್ನಲೆ ಮನನೊಂದ ವ್ಯಕ್ತಿ ಆತ್ಮಹತ್ಯೆ ಮಾಡಿಕೊಳ್ಳುವುದನ್ನು ತನ್ನ ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿ, ಮನೆಯಲ್ಲಿ ಫ್ಯಾನ್‌ಗೆ ನೇಣು ಬಿಗಿದುಕೊಂಡು ಸಾವನ್ನಪ್ಪಿರುವ ಘಟನೆ ನಗರದ ಚನ್ನಪಟ್ಟಣ ಬಡಾವಣೆಯಲ್ಲಿ ನಡೆದಿದೆ. ಸಾಗರ್ (37) ಆತ್ಮಹತ್ಯೆಗೆ ಶರಣಾದ ವ್ಯಕ್ತಿ.



ಮೂಲತಃ ತಾಲ್ಲೂಕಿನ ಯಲಗುಂದ ಗ್ರಾಮದವರಾದ ಸಾಗರ್ ಖಾಸಗಿ ಫೈನಾನ್ಸ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದು, ಚನ್ನಪಟ್ಟಣ ಬಡಾವಣೆಯಲ್ಲಿ ಬಾಡಿಗೆ ಮನೆಯಲ್ಲಿ ಕುಟುಂಬದ ಜೊತೆ ವಾಸವಿದ್ದರು. ಪತಿ-ಪತ್ನಿ ನಡುವೆ ಆಗಾಗ್ಗೆ ಜಗಳ ನಡೆಯುತ್ತಿದ್ದು ಇದರಿಂದ ಬೇಸತ್ತು ಮನೆಯಲ್ಲಿಯೇ ಫ್ಯಾನ್‌ಗೆ ನೇಣುಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ. ಆತ್ಮಹತ್ಯೆಗೂ ಮುನ್ನ ತನ್ನ ಮೊಬೈಲ್‌ನಲ್ಲಿ ರೆಕಾರ್ಡ್ ಆನ್ ಮಾಡಿ ಆತ್ಮಹತ್ಯೆ ಮಾಡಿಕೊಂಡಿದ್ದು, 2 ನಿಮಿಷ 24 ಸೆಕೆಂಡ್‌ಗಳಲ್ಲಿ ಮೃತಪಟ್ಟಿದ್ದಾರೆ. ಆ ವಿಡಿಯೋ ವೈರಲ್ ಆಗಿದೆ. ನಗರಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಕ್ಷೇತ್ರ ಮರುವಿಂಗಡಣೆ ಚಿತಾವಣಿಯಲ್ಲಿ ಮಹಿಳಾ ಮೀಸಲು ಕಾನೂನಿಗೆ ತಿದ್ದುಪಡಿ

• ಪ್ರಜೋದಯ ವರದಿ



**ಕೂಚ್ ಬೆಹಾರ್:** ದೇಶವನ್ನು ಛಿದ್ರ ಮಾಡುವಂತಹ ಕ್ಷೇತ್ರ ಮರುವಿಂಗಡಣೆ ಮಸೂದೆ ತರುವ ಚಿತಾವಣೆಯಲ್ಲಿ ಮಹಿಳಾ ಮೀಸಲಾತಿ ಕಾನೂನಿಗೆ ತಿದ್ದುಪಡಿಯನ್ನು ಉಪಯೋಗಿಸ ಲಾಗುತ್ತಿದೆಂದು ಮಮತಾ ಬ್ಯಾನರ್ಜಿ ಅವರು ಆರೋಪಿಸಿದ್ದಾರೆ. ಟಿಎಂಸಿ ಪ್ರತಿ ಹಂತದಲ್ಲೂ ಕೇಂದ್ರ ಸರ್ಕಾರದ ಈ ನಡೆ ವಿರುದ್ಧ ಹೋರಾಡುತ್ತದೆಂದು ಅವರು ತಮ್ಮ ಪಕ್ಷದ ಚುನಾವಣಾ ರ್‍ಯಾಲಿಯಲ್ಲಿ ಪ್ರತಿಪಾದಿಸಿದ್ದಾರೆ.

ಮಹಿಳಾ ಮೀಸಲಾತಿ ಕಾಯ್ದೆಗೆ ತಿದ್ದುಪಡಿ ತರಲು ಗುರುವಾರ ಸಂವಿಧಾನಕ್ಕೆ 131ನೇ ತಿದ್ದುಪಡಿ ಮಸೂದೆ ಮಂಡಿಸಲಾಯಿತು. ಅದರ ಜೊತೆಗೆ, ಕ್ಷೇತ್ರ ಪುನರ್‌ವಿಂಗಡಣೆ ಮಸೂದೆ ಮತ್ತು ಪ್ರಸ್ತಾಪಿತ ಮಹಿಳಾ ಮೀಸಲಾತಿಯನ್ನು ಕೇಂದ್ರಾಡಳಿತ ಪ್ರದೇಶಗಳಾದ ದೆಹಲಿ, ಪುದುಚೇರಿ ಮತ್ತು ಜಮ್ಮು ಮತ್ತು ಕಾಶ್ಮೀರದಲ್ಲಿ ಜಾರಿಗೆ ತರುವ ಉದ್ದೇಶದಿಂದ ಕೇಂದ್ರಾಡಳಿತ ಪ್ರದೇಶಗಳ ತಿದ್ದುಪಡಿ ಮಸೂದೆಯನ್ನೂ ಸಹ ಮಂಡಿಸಲಾಗಿತ್ತು ಎಂದರು.

# ಗ್ಯಾಸ್ ಬುಕ್ಕಿಂಗ್ ಅವಧಿ ಪುನರ್ ಪರಿಶೀಲಿಸಿ

## ಕೇಂದ್ರ ಪೆಟ್ರೋಲಿಯಂ ರಾಜ್ಯ ಸಚಿವರಿಗೆ ಶ್ರೇಯಸ್ ಪಟೇಲ್ ಮನವಿ

• ಪ್ರಜೋದಯ ವರದಿ

**ಹಾಸನ:** ಮಧ್ಯಪ್ರಾಚ್ಯ ಯುದ್ಧದಿಂದಾಗಿ ಜಿಲ್ಲೆಯಲ್ಲಿ ಎಲ್‌ಪಿಜಿ, ವಾಣಿಜ್ಯ ಸಿಲಿಂಡರ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿರುವ ಹಿನ್ನಲೆಯಲ್ಲಿ ಸಂಸದ ಶ್ರೇಯಸ್ ಪಟೇಲ್ ಅವರು ಕೇಂದ್ರ ಪೆಟ್ರೋಲಿಯಂ ಮತ್ತು ಪ್ರಕೃತಿ ಅನಿಲ ರಾಜ್ಯ ಸಚಿವ ಸುರೇಶ್ ಗೋಪಿ ಅವರನ್ನು ಭೇಟಿಯಾಗಿ ಸಮಸ್ಯೆ ಬಗೆಹರಿಸುವಂತೆ ಮನವಿ ಮಾಡಿದರು.

ಪ್ರಸ್ತುತ ಎಲ್‌ಪಿಜಿ ಬುಕ್ಕಿಂಗ್ ಅವಧಿ ನಗರ ಪ್ರದೇಶಗಳಲ್ಲಿ 25 ದಿನಗಳು ಮತ್ತು ಗ್ರಾಮೀಣ ಪ್ರದೇಶಗಳಲ್ಲಿ 45 ದಿನಗಳಾಗಿವೆ. ಗ್ರಾಮೀಣ ಪ್ರದೇಶಗಳಲ್ಲಿ ಅವಿಭಕ್ತ ಕುಟುಂಬಗಳು ಹೆಚ್ಚು ಇರುವುದರಿಂದ ಹಾಗು ಎಲ್‌ಪಿಜಿ ಮೇಲಿನ ಅವಲಂಬನೆ ಹೆಚ್ಚಿರುವುದರಿಂದ, 45 ದಿನಗಳ ಅವಧಿ ಕೆಲವೊಮ್ಮೆ ಗೃಹ ಬಳಕೆ ನಿರ್ವಹಿಸಲು ಅಡಚಣೆ ಆಗುತ್ತಿದೆ. ಈ ಹಿನ್ನಲೆ ಗ್ರಾಮೀಣ ಪ್ರದೇಶಗಳಿಗಾಗಿ ಬುಕ್ಕಿಂಗ್ ಅವಧಿಯನ್ನು ಪುನರ್ ವಿಮರ್ಶಿಸಿ, 30-35 ದಿನಗಳಿಗೆ ಕಡಿಮೆ ಮಾಡಲು ಪರಿಗಣಿಸುವಂತೆ ವಿನಮ್ರವಾಗಿ ವಿನಂತಿಸಿದ್ದಾರೆ.

ಓಟಿಪಿ ಆಧಾರಿತ ಡೆಲಿವರಿ ದೃಢೀಕರಣವನ್ನು ಈಗ ಶೇ.50 ರಿಂದ 100 ಕಡ್ಡಾಯಗೊಳಿಸಲಾಗಿದೆ. ಇದರ ಉದ್ದೇಶ ಶ್ಲಾಘನೀಯವಾದರೂ, ಗ್ರಾಮೀಣ ಪ್ರದೇಶಗಳಲ್ಲಿ ಕೆಳಗಿನ ಸಮಸ್ಯೆಗಳು ಎದುರಾಗುತ್ತಿವೆ. ಮೊಬೈಲ್ ನೆಟ್‌ವರ್ಕ್ ಕೊರತೆ, ಡಿಜಿಟಲ್ ತಿಳುವಳಿಕೆ ಕಡಿಮೆ, ಹಿರಿಯ ನಾಗರಿಕರು ಮತ್ತು ಅಕ್ಷರ ಜ್ಞಾನ ಇಲ್ಲದವರು ಅನುಭವಿಸುವ ತೊಂದರೆ ಮೊದಲಾದ ಸಮಸ್ಯೆಗಳನ್ನು ಗಮನದಲ್ಲಿಟ್ಟುಕೊಂಡು, ಕೆಳಗಿನ ಕ್ರಮ ಪರಿಗಣಿಸುವಂತೆ ವಿನಂತಿಸಿದ್ದಾರೆ. ಓಟಿಪಿ ಅನುಸರಣೆ ಮಟ್ಟದಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶಗಳಿಗೆ ಸ್ವಲ್ಪ ಸಡಿಲಿಕೆ ನೀಡಬೇಕು, ಬಾರ್ಕೋಡ್ ಅಥವಾ ಕ್ಯೂಆರ್ ಆಧಾರಿತ ಪರ್ಯಾಯ ದೃಢೀಕರಣ ವ್ಯವಸ್ಥೆಗಳನ್ನು ಪರಿಚಯಿಸುವುದು, ಇದರಿಂದ ಕೊನೆಯ ಹಂತದ ವಿತರಣೆ ಸುಲಭವಾಗುತ್ತದೆ ಎಂದು ಮನವರಿಕೆ ಮಾಡಿದರು.



ಸ್ಥಳೀಯ ಬೇಡಿಕೆಗೆ ಅನುಗುಣವಾಗಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಲಭ್ಯತೆ ಯಾವಾಗಲೂ ಸಮರ್ಪಕವಾಗಿಲ್ಲವೆಂದು ಗಮನಕ್ಕೆ ಬಂದಿದೆ. ಇದರಿಂದ ಹೋಟೆಲ್‌ಗಳು ಮತ್ತು ಸಣ್ಣ ವ್ಯಾಪಾರಸ್ಥರು ತೊಂದರೆ ಅನುಭವಿಸುತ್ತಿದ್ದಾರೆ. ಸ್ಥಳೀಯ ಹೋಟೆಲ್ ಮತ್ತು ಸಣ್ಣ ವ್ಯಾಪಾರ ಸಂಘಟನೆಗಳು ಚಿಂತಾಕ್ರಾಂತರಾಗಿದ್ದಾರೆ. 19 ಕೆ.ಜಿ. ಸಿಲಿಂಡರ್‌ಗಳು ಹಿಂದಿನಂತೆ ಸರಬರಾಜು ಕಡಿಮೆಯಾಗಿದೆ ಎಂಬ ಅಭಿಪ್ರಾಯವಿದ್ದು, ಕಾರ್ಯಾಚರಣೆಗೆ ಅಡಚಣೆ ಉಂಟಾಗಿದೆ. ಇದರ ಕುರಿತು ಪರಿಶೀಲಿಸಿ ನಿರಂತರ ಸರಬರಾಜು ಖಚಿತ ಪಡಿಸುವ ಕ್ರಮಗಳನ್ನು ಕೈಗೊಳ್ಳುವಂತೆ ಮನವಿ ಮಾಡಿದರು.

ಸಣ್ಣ ಆಹಾರ ವ್ಯಾಪಾರಿಗಳು ಮತ್ತು ಸಣ್ಣ ಉದ್ಯಮಿಗಳಿಗೆ ಇದರ ಲಭ್ಯತೆ ಕಡಿಮೆ ಇದ್ದು, ಸುಲಭವಾಗಿ ಪಡೆಯಲು ಅವಕಾಶ ಕಲ್ಪಿಸುವುದು ಅವಶ್ಯಕವಾಗಿದೆ. ಮೇಲಿನ ವಿಷಯಗಳನ್ನು ಗಮನದಲ್ಲಿಟ್ಟುಕೊಂಡು, ಗ್ರಾಮೀಣ ಮನೆಗಳು ಮತ್ತು ಸಣ್ಣ ವಾಣಿಜ್ಯ ಬಳಕೆದಾರರಿಗೆ ಎಲ್‌ಪಿಜಿ ಲಭ್ಯತೆ ಮತ್ತು ವಿತರಣೆ ಸುಧಾರಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿಕೊಂಡರು.

## ನಗದು, ಚೆಕ್ ವಾರಸುದಾರರಿಗೆ ತಲುಪಿಸಿದ ಕೆಎಸ್‌ಆರ್‌ಟಿಸಿ ಸಿಬ್ಬಂದಿ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ಬಸ್‌ನಲ್ಲೇ ಬಿಟ್ಟು ಹೋಗಿದ್ದ 67.05 ಸಾವಿರ ರೂ. ಹಾಗು 1.10 ಲಕ್ಷ ರೂ. ಮೌಲ್ಯದ ಚೆಕ್‌ನ್ನು ಕೆಎಸ್‌ಆರ್‌ಟಿಸಿ ಬಸ್ ಚಾಲಕ ಹಾಗು ನಿರ್ವಾಹಕ ವಾರಸುದಾರರಿಗೆ ಹಿಂದಿರುಗಿಸಿ ಮಾನವೀಯತೆ ಮೆರೆದಿದ್ದಾರೆ.

ಚನ್ನರಾಯಪಟ್ಟಣದಿಂದ ಹಾಸನಕ್ಕೆ ಪ್ರಯಾಣಿಸುತ್ತಿದ್ದ ಬಸ್ ತಾಂತ್ರಿಕ ಸಮಸ್ಯೆಯಿಂದ ಡಿಪೋಗೆ ತೆರಳಬೇಕಾಯಿತು. ಆಗ ಬಸ್‌ನಲ್ಲಿದ್ದ ಪ್ರಯಾಣಿಕರನ್ನು ಕೆಳಗಿಳಿಸಿ ಬೇರೆ ಬಸ್‌ಗೆ ಹತ್ತಿಸಿದ್ದ ಚಾಲಕ ಎನ್.ಸಿ.ಕೃಷ್ಣೇಗೌಡ ಹಾಗು ನಿರ್ವಾಹಕ ಜಗದೀಶ್ ಅವರು ಬಸ್ ದುರಸ್ತಿಗಾಗಿ ಡಿಪೋಗೆ ವಾಪಾಸ್ ಹೋದಾಗ ಬ್ಯಾಗ್ ಕಂಡಿದೆ.

ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಕಪಿಲ್ ಶರ್ಮಾ ಮತ್ತು ಬಾಲ ಕಿಶನ್ ಶರ್ಮಾ ಪ್ರಯಾಣಿಸುತ್ತಿದ್ದರು. ಅವರು ಬದಲಿ ಬಸ್ ಅನ್ನು ಏರುವಾಗ ಚನ್ನರಾಯಪಟ್ಟಣದ ವರ್ತಕರಿಂದ ಸಂಗ್ರಹಿಸಿದ್ದ 67.05 ಸಾವಿರ ರೂ. ಹಣ ಹಾಗು 1.10 ಲಕ್ಷ ರೂ. ಮೌಲ್ಯದ ಸಹಿ ಮಾಡಿದ ಚೆಕ್ ಇರುವ ಬ್ಯಾಗ್ ಬಿಟ್ಟು ಇಳಿದು ಹೋಗಿದ್ದರು.

ಬಸ್ ದುರಸ್ತಿಗಾಗಿ ಚನ್ನರಾಯಪಟ್ಟಣ ಘಟಕಕ್ಕೆ ವಾಪಾಸ್ ತಂದಾಗ ಬ್ಯಾಗ್ ಇರುವುದು ಗೊತ್ತಾಗಿದೆ. ಬ್ಯಾಗ್ ಪರಿಶೀಲಿಸಿದಾಗ ಸಹಿ ಮಾಡಿದ ಖಾಲಿ ಚೆಕ್ ಹಾಗು ಹಣವಿರುವುದನ್ನು ಗಮನಿಸಿದ ನಿರ್ವಾಹಕ ಮತ್ತು ಚಾಲಕರು ಕೂಡಲೇ ಘಟಕ ವ್ಯವಸ್ಥಾಪಕರಿಗೆ ವಿಷಯ ತಲುಪಿಸಿದ್ದಾರೆ. ಘಟಕ ವ್ಯವಸ್ಥಾಪಕ ರಾದ ಜ್ಞಾನೇಶ್ ಅವರು ಬ್ಯಾಗ್ ಪರಿಶೀಲಿಸಿ ಬ್ಯಾಗ್‌ನಲ್ಲಿ ದೊರೆತ ಆಧಾರ್ ಕಾರ್ಡ್‌ನಿಂದ ದೂರವಾಣಿ ಸಂಖ್ಯೆಯನ್ನು ಪತ್ತೆ ಹಚ್ಚಿ ಅವರನ್ನು ಸಂಪರ್ಕಿಸಿದ್ದಾರೆ. ಹಣದ ಬ್ಯಾಗ್ ಕಳೆದುಕೊಂಡು ಗಾಬರಿಯಲ್ಲಿದ್ದ ಕಪಿಲ್ ಶರ್ಮಾ ಮತ್ತು ಬಾಲಕಿಶನ್ ಶರ್ಮಾ ಓಡೋಡಿ ಬಂದು ಚನ್ನರಾಯಪಟ್ಟಣ ಘಟಕವನ್ನು ಸಂಪರ್ಕಿಸಿದ್ದಾರೆ.

ಘಟಕ ವ್ಯವಸ್ಥಾಪಕರು ಹಾಗು ಭದ್ರತಾ ಸಿಬ್ಬಂದಿ ಹಣದ ಬ್ಯಾಗ್ ಮಾಲೀಕ ಕಪಿಲ್ ಶರ್ಮಾ ಮತ್ತು ಬಾಲಕಿಶನ್ ಶರ್ಮಾ ವಿಳಾಸ ದಾಖಲೆಗಳನ್ನು ಖಚಿತಪಡಿಸಿಕೊಂಡು ಹಿಂತಿರುಗಿಸಿದ್ದಾರೆ. ಏತನ್ಮಧ್ಯೆ ಕಪಿಲ್ ಶರ್ಮಾ ಮತ್ತು ಬಾಲಕಿಶನ್ ಶರ್ಮಾ ಚನ್ನರಾಯಪಟ್ಟಣದ ಕಬ್ಬಿಣದ ಅಂಗಡಿಗಳಿಗೆ ಸಾಮಾಗ್ರಿ ಸರಬರಾಜು ಮಾಡುತ್ತಿದ್ದು ಅವರಿಂದ ಪಡೆದ 67.05 ಸಾವಿರ ರೂ. ಹಾಗು ಸಹಿ ಮಾಡಿದ 1.10 ಲಕ್ಷ ರೂ. ಮೌಲ್ಯದ ಚೆಕ್‌ಗಳನ್ನು ಹಾಸನಕ್ಕೆ ತೆಗೆದುಕೊಂಡು ಹೋಗುತ್ತಿದ್ದರು. ಮೇಲಾಧಿಕಾರಿಗಳ ನೆರವಿನಿಂದ ವಾರಸುದಾರರಿಗೆ ಹಣ ಹಾಗು ಚೆಕ್ ತಲುಪಿ ಪ್ರಕರಣ ಸುಖಾಂತ್ಯ ಕಂಡಿದೆ.

## ಅಬ್ಬೂರು ಮಾಚಗೋಡನಹಳ್ಳಿಯಲ್ಲಿ ಡಿಸಿ ಸಂಚಾರ

» ಮೊದಲನೇ ಪುಟದಿಂದ

ಸಕಲೇಶಪುರ ಉಪ ವಿಭಾಗಾಧಿಕಾರಿ, ತಹಸೀಲ್ದಾರ್, ಸಿಪಿಐ, ಪಿಎಸ್‌ಐ ಹಾಗು ಕಂದಾಯ ಇಲಾಖೆ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಜರಿದ್ದರು.

ಏನಿದು ಪ್ರಕರಣ

ಗ್ರಾಮದ ಸರ್ವೆ ನಂ. 94ರಲ್ಲಿ ಒಟ್ಟು 137ಎಕರೆ ಸರ್ಕಾರಿ ಗೋಮಾಳವಿದೆ. ಈ ಪೈಕಿ 30 ವರ್ಷಗಳ ಹಿಂದೆಯೇ ಹಾಲಿ ಅನುಭವವಿದ್ದು, ಅರ್ಜಿ ಸಲ್ಲಿಸಿದ್ದ ಅಧಿಕೃತ 30 ಮಂದಿಗೆ 60 ಎಕರೆಗೂ ಹೆಚ್ಚು ಭೂಮಿಯನ್ನು ಬಗರ್ ಹುಕುಂ ಸಾಗುವಳಿ ಮೂಲಕ ಮಂಜೂರು ಮಾಡಲಾಗಿದೆ. ಅಲ್ಲದೆ ಈ ಅವಧಿಯಲ್ಲಿಯೇ ಗ್ರಾಮ ಠಾಣೆಗೆ 33 ಎಕರೆ 20 ಗುಂಟೆ ಜಾಗವನ್ನು ಮೀಸಲಿಡುವ ಕೆಲಸ ಆಗಿದೆ. ಆ ಸಲುವಾಗಿ ಸುಮಾರು 60ಕ್ಕೂ ಹೆಚ್ಚು ಮಂದಿಗೆ ಮನೆ ನಿರ್ಮಿಸಿಕೊಳ್ಳಲು ಅಳತೆಯನ್ನು ನಿಗದಿಗೊಳಿಸಿ ಹಕ್ಕು ಪತ್ರವನ್ನು ತಾಲ್ಲೂಕು ಆಡಳಿತ ನೀಡಿದೆ. ಅದರನ್ವಯ ಐದಾರು ಮಂದಿ ಮನೆ ನಿರ್ಮಿಸಿಕೊಂಡು ವಾಸವಿದ್ದರೇ ಉಳಿದವರು ಇತ್ತೀಚೆಗೆ ಮನೆ ನಿರ್ಮಿಸಿಕೊಳ್ಳಲು ಶೆಡ್‌ಗಳನ್ನು ಹಾಕಿಕೊಂಡಿದ್ದರು.

ಅದನ್ನು ವಿರೋಧಿಸಿ ಗ್ರಾಮದ ಕೆಲವರು ತಾಲ್ಲೂಕು ಆಡಳಿತಕ್ಕೆ ಮನವಿ ನೀಡಿ ಗ್ರಾಮಕ್ಕೆ ಅಗತ್ಯ ಮೂಲ ಸೌಕರ್ಯಗಳನ್ನು ಕಲ್ಪಿಸುವ ಸಲುವಾಗಿ ಈ ಜಾಗವನ್ನು ಮೀಸಲಿಡಬೇಕೆಂದು ಒತ್ತಾಯಿಸಿದ್ದರ ಪರಿಣಾಮ ತಾಲ್ಲೂಕು ಆಡಳಿತ ತಾತ್ಕಲಿಕವಾಗಿ ಯಾರೂ ಕೂಡ ಮನೆ ನಿರ್ಮಿಸಿಕೊಳ್ಳುವುದು ಬೇಡ ಅರ್ಹರನ್ನು ಗುರುತಿಸಿ ಮತ್ತು ಹಕ್ಕುಪತ್ರಗಳ ದಾಖಲೆಗಳನ್ನು ಪರಿಶೀಲಿಸಿದ ಬಳಿಕ ಮುಂದಿನ ನಿರ್ಧಾರ ಕೈಗೊಳ್ಳುವ ಸಲುವಾಗಿ ಅನಧಿಕೃತ ಶೆಡ್‌ಗಳನ್ನು ಜೆಸಿಬಿ ಮೂಲಕ ತೆರವುಗೊಳಿಸಿತ್ತು.

### ಡಿಸಿ ಕೈಗೆ ಮುತ್ತಿಕ್ಕಿದ ವೃದ್ಧೆ

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರು ಅಬ್ಬೂರು, ಮಾಚಗೋಡನಹಳ್ಳಿ ಗ್ರಾಮಕ್ಕೆ ಭೇಟಿ ನೀಡಿದ ವೇಳೆ ವೃದ್ಧೆಯೊಂದಿಗೆ ಆತ್ಮೀಯವಾಗಿ ಕುಶಲೋಪರಿ ನಡೆಸಿ ಗಮನ ಸೆಳೆದರು. ಗ್ರಾಮದ ವೃದ್ಧೆಯನ್ನು ಪಕ್ಕದಲ್ಲಿ ಕುರ್ಚಿಯಲ್ಲಿ ಕೂರಿಸಿಕೊಂಡು ಸರ್ಕಾರದಿಂದ ಎಲ್ಲಾ ಸೌಕರ್ಯ ದೊರೆಯುತ್ತಿದೆಯಾ ಹಾಗು ಮಕ್ಕಳು ಚೆನ್ನಾಗಿ ನೋಡಿಕೊಳ್ಳುತ್ತಿದ್ದಾರಾ. ಏನಾದರೂ ಸಮಸ್ಯೆ ಇದ್ದರೆ ಹೇಳಿ ಸ್ಥಳದಲ್ಲಿಯೇ ಬಗೆಹರಿಸಿಕೊಡುವೆ ಎಂದು ವೃದ್ಧೆಯ ಕೈ ಹಿಡಿದು ಜಿಲ್ಲಾಧಿಕಾರಿ ಕೇಳಿದರು.

ಉತ್ತರಿಸಿದ ವೃದ್ಧೆ ನಿಮ್ಮನ್ನು ನೋಡಿದ ಭಾಗ್ಯ ನನಗಾಗಿದೆ ಎಂದು ಜಿಲ್ಲಾಧಿಕಾರಿಯವರ ಕೈಮುಟ್ಟಿ ಮುತ್ತು ಕೊಡುವ ಮೂಲಕ ಸಂತಸ ವ್ಯಕ್ತಪಡಿಸಿದರು.

# ಕ್ರಾಫರ್ಡ್ ಆಸ್ಪತ್ರೆಗೆ ಪ್ರಯೋಗಾಲಯ: ಸಿಮೆಂಟ್ ಮಂಜು

• ಪ್ರಜೋದಯ ವರದಿ

**ಸಕಲೇಶಪುರ:** ಜನಸಾಮಾನ್ಯರಿಗೆ ಇನ್ನಷ್ಟು ಸುಲಭ, ವೇಗ ಹಾಗು ಸಮಗ್ರ ಆರೋಗ್ಯ ಸೇವೆ ಒದಗಿಸುವ ಉದ್ದೇಶದಿಂದ ಪಟ್ಟಣದ ಕ್ರಾಫರ್ಡ್ ಆಸ್ಪತ್ರೆ ಆವರಣದಲ್ಲಿ 50 ಲ.ರೂ. ವೆಚ್ಚದಲ್ಲಿ ಆಧುನಿಕ ತಂತ್ರಜ್ಞಾನವುಳ್ಳ ನೂತನ ಪ್ರಯೋಗಾಲಯ ಕಟ್ಟಡ ನಿರ್ಮಿಸಲಾಗುತ್ತಿದೆ ಎಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.

ಪಟ್ಟಣದ ಕ್ರಾಫರ್ಡ್ ಆಸ್ಪತ್ರೆ ಆವರಣದಲ್ಲಿ ನೂತನ ಪ್ರಯೋಗಾಲಯ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಹಲವು ಪ್ರಮುಖ ವೈದ್ಯಕೀಯ ಪರೀಕ್ಷೆಗಳಿಗೆ ಇಲ್ಲಿನ ರೋಗಿಗಳು ಹಾಸನಕ್ಕೆ ತೆರಳಬೇಕಾದ ಅನಿವಾರ್ಯತೆ ಎದುರಿಸುತ್ತಿದ್ದರು. ಕೆಲವು ಲ್ಯಾಬ್ ವರದಿಗಳನ್ನು ಪಡೆಯಲು ಮೂರರಿಂದ ನಾಲ್ಕು ದಿನಗಳ ವರೆಗೆ ಕಾಯಬೇಕಾಗುತ್ತಿದ್ದ ಸಮಸ್ಯೆ ಇತ್ತೆಂದು ತಿಳಿಸಿದರು.



ಈಗ ಆಸ್ಪತ್ರೆ ಆವರಣದಲ್ಲೇ ಆಧುನಿಕ ಸೌಲಭ್ಯಗಳೊಂದಿಗೆ ಹೊಸ ಲ್ಯಾಬ್ ನಿರ್ಮಾಣವಾಗುತ್ತಿರುವುದರಿಂದ ಸಾರ್ವಜನಿಕರಿಗೆ ತಕ್ಷಣ ಪರೀಕ್ಷಾ ಸೇವೆಗಳು ಲಭ್ಯವಾಗಲಿವೆ. ಸಮಯಕ್ಕೆ ಸರಿಯಾಗಿ ವರದಿಗಳು ದೊರೆಯುವುದರಿಂದ ಚಿಕಿತ್ಸೆ ಪ್ರಕ್ರಿಯೆಗೂ ವೇಗ ಬರಲಿದ್ದು, ವಿಶೇಷವಾಗಿ ಗ್ರಾಮೀಣ ಭಾಗದ ಜನರಿಗೆ ಅನುಕೂಲವಾಗಲಿದೆ ಎಂದು ಹೇಳಿದರು.

ನೂತನ ಲ್ಯಾಬ್‌ನಲ್ಲಿ ಆಧುನಿಕ ವೈದ್ಯಕೀಯ ಪರೀಕ್ಷಾ ಸಾಧನಗಳನ್ನು ಅಳವಡಿಸಲಾಗುತ್ತಿದ್ದು, ವಿವಿಧ ರಕ್ತ ಪರೀಕ್ಷೆ, ಮೂತ್ರ ಪರೀಕ್ಷೆ ಸೇರಿ ಅನೇಕ ಅಗತ್ಯ ತಪಾಸಣೆಗಳನ್ನು ಸ್ಥಳೀಯ ಮಟ್ಟದಲ್ಲೇ ನಡೆಸಲು ಸಾಧ್ಯವಾಗಲಿದೆ. ಅದರಿಂದ ರೋಗಿಗಳ ಸಮಯ ಮತ್ತು ಹಣ ಎರಡೂ ಉಳಿತಾಯವಾಗಲಿವೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಕ್ರಾಫರ್ಡ್ ಆಸ್ಪತ್ರೆಗೆ ಇನ್ನೂ ಹೆಚ್ಚಿನ ಮೂಲಸೌಲಭ್ಯಗಳ ಅಗತ್ಯವಿದ್ದು, ಮುಂದಿನ ದಿನಗಳಲ್ಲಿ ಆಸ್ಪತ್ರೆಗೆ ಬೇಕಾದ ಇನ್ನಷ್ಟು ಸೌಲಭ್ಯಗಳನ್ನು ಒದಗಿಸಿ ಮಾದರಿ ಆಸ್ಪತ್ರೆಯನ್ನಾಗಿ ರೂಪಿಸುವ ದಿಟ್ಟ ಸಂಕಲ್ಪ ಹೊಂದಿದ್ದೇವೆಂದರು.

ತಾಲ್ಲೂಕು ವೈದ್ಯಾಧಿಕಾರಿ ಡಾ|| ಮಹೇಶ್, ಕ್ರಾಫರ್ಡ್ ಆಸ್ಪತ್ರೆಯ ವೈದ್ಯಾಧಿಕಾರಿ ಡಾ|| ಅರುಣ್ ಕುಮಾರ್, ಬಿಜೆಪಿ ತಾಲ್ಲೂಕು ಅಧ್ಯಕ್ಷ ವಳಲಹಳ್ಳಿ ಅಶ್ವಥ್, ಬಿಜೆಪಿ ಪ್ರಧಾನ ಕಾರ್ಯದರ್ಶಿ ಸೋಮಶೇಖರ್, ಬಿಜೆಪಿ ನಗರ ಅಧ್ಯಕ್ಷ ದಿಂಬು ಲೋಕೇಶ್, ಪುರಸಭಾ ಮಾಜಿ ಸದಸ್ಯ ಪ್ರದೀಪ್, ಕೆಎಸ್‌ಆರ್‌ಟಿಸಿ ಪುಟ್ಟಣ್ಣ, ಗುರು ಪ್ರಶಾಂತ್, ವಿನಯ್, ಆರೋಗ್ಯ ಇಲಾಖೆಯ ಅಧಿಕಾರಿಗಳು, ಅರ್ಚಕ ಶ್ರೀಕಾಂತ್ ಮುಂತಾದವರಿದ್ದರು.

## ಕುಡಿಯುವ ನೀರು, ಕೃಷಿಗೆ ತೊಂದರೆಯಾಗದಿರಲಿ

• ಪ್ರಜೋದಯ ವರದಿ


**ಹಾಸನ:** ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಶಾಸಕ ಸಿಮೆಂಟ್ ಮಂಜು ಅವರು ಶುಕ್ರವಾರ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಕುಡಿಯುವ ನೀರು, ಕೃಷಿ ಚಟುವಟಿಕೆಗೆ ರಸಗೊಬ್ಬರ, ಬಿತ್ತನೆ ಬೀಜದ ಕೊರತೆಯಾಗದಂತೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಆಲೂರು ತಾಲ್ಲೂಕಿನ 15 ಗ್ರಾಮ ಪಂಚಾಯಿತಿ ಮತ್ತು ಕಟ್ಟಾಯ ಹೋಬಳಿಯ 9 ಗ್ರಾಮ ಪಂಚಾಯಿತಿ ವ್ಯಾಪ್ತಿಯ ಆಡಳಿತಾಧಿಕಾರಿಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.



ಕುಡಿಯುವ ನೀರು ಒದಗಿಸು ವುದು, ಕೃಷಿ ಮತ್ತು ತೋಟಗಾರಿಕೆ ಇಲಾಖೆಯಿಂದ ರೈತರಿಗೆ ಲಭ್ಯವಿರುವ ಯೋಜನೆಗಳನ್ನು ಒದಗಿಸುವ ಕುರಿತು ಚರ್ಚಿಸಲಾಯಿತು. ಬೇಸಿಗೆಯಾಗಿರುವುದರಿಂದ ಕುಡಿಯುವ ನೀರಿಗೆ ತೊಂದ ರೆಯಾಗದಂತೆ ಹಾಗು ರೈತರಿಗೆ ಅಗತ್ಯ ಮಾಹಿತಿ ಮತ್ತು ಸವಲತ್ತುಗಳನ್ನು ಪೂರೈಕೆ ಮಾಡುವಂತೆ ತಿಳಿಸಿದರು.

## ಬಾಗೆ ಜೆಎಸ್‌ಎಸ್ ಶಾಲೆಗೆ ಶೇ.100 ಫಲಿತಾಂಶ





• ಪ್ರಜೋದಯ ವರದಿ

**ಸಕಲೇಶಪುರ:** ತಾಲ್ಲೂಕಿನ ಬಾಗೆಯ ಜೆಎಸ್‌ಎಸ್ ಪಬ್ಲಿಕ್ ಶಾಲೆಯು 2026ನೇ ಸಾಲಿನ ಸಿಬಿಎಸ್‌ಇ 10ನೇ ತರಗತಿ ಪರೀಕ್ಷೆಯಲ್ಲಿ ಸತತ 17ನೇ ವರ್ಷವೂ ಶೇ.100 ರಷ್ಟು ಫಲಿತಾಂಶ ದಾಖಲಿಸಿದೆ. ಪರೀಕ್ಷೆಗೆ ಹಾಜರಾಗಿದ್ದ 84 ವಿದ್ಯಾರ್ಥಿಗಳಲ್ಲಿ 57 ಮಕ್ಕಳು ಅತ್ಯುನ್ನತ ಶ್ರೇಣಿಯಲ್ಲಿ (ಡಿಸ್ಟಿಂಕ್ಷನ್) ಹಾಗು 27 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾ ಗುವ ಮೂಲಕ ಶಾಲೆಗೆ ಕೀರ್ತಿ ತಂದಿದ್ದಾರೆ. ಶಾಲೆಯ ಶಿಸ್ತುಬದ್ಧ ಶಿಕ್ಷಣ ಹಾಗು ವಿದ್ಯಾರ್ಥಿಗಳ ಪರಿಶ್ರಮದಿಂದಾಗಿ ಸಾಧನೆ ಸಾಧ್ಯವಾಗಿದೆ ಎಂದು ಮಂಡಳಿಯು ಹರ್ಷ ವ್ಯಕ್ತಪಡಿಸಿದೆ.

ಸಾಧನೆ ಮಾಡಿದ ಪ್ರಮುಖ ವಿದ್ಯಾರ್ಥಿಗಳಲ್ಲಿ ಧೂಪ (ಶೇ.95.4), ತಕ್ಷಾಜೈನ್ (ಶೇ.94.6), ಕುಲ್ಸುಮ್ ಫರ್ಹಾನ್ (ಶೇ.94), ಕೆ.ಟಿ.ಸಾಧನ (ಶೇ.94), ಹೆಚ್.ಡಿ.ಯುಕ್ತಾ (ಶೇ. 94), ಜಿ.ಡಿ.ಲಿಖಿತ್ ಪಟೇಲ್ (ಶೇ. 93.6), ನೈಲ ಅಬ್ದುಲ್ ಮುನಫ್ (ಶೇ.93.6), ಜೋಯಲ್ ಜೋಸೆಫ್ (ಶೇ.92.8), ಎ.ವಿ.ಹರ್ಷಿತಾ (ಶೇ. 92.6), ಶಾರ್ವಿಕಾ ಎ.ಬೆಳ್ಳೂರು (ಶೇ. 92.6), ಬಿ.ಎಲ್.ಪ್ರೇರಣ್ (ಶೇ.92.4), ಆದ್ಯ ಚೇತನ್ (ಶೇ.92.2), ಬಿ.ಜಿ.ವಿನಾಯಕ (ಶೇ.92), ಬಿ.ಎಂ.ವರ್ಷಿತಾ (ಶೇ. 91.4), ಕೆ.ಕೆ.ರಿಷಿಕಾ (ಶೇ.91.2), ಎ.ಕೆ.ತೇಜಸ್(ಶೇ.90.4), ಆರುಷ್ ವಿ.ಬಾಳ್ಳು (ಶೇ.90) ಹಾಗು ಬಿ.ವಿ.ಜೀವಿತಾ (ಶೇ.90) ಅಂಕ ಗಳಿಸಿ ಸಾಧನೆ ಮಾಡಿ ದ್ದಾರೆ. ಎಲ್ಲಾ ವಿದ್ಯಾರ್ಥಿಗಳನ್ನು ಪ್ರಾಂಶುಪಾಲ ಬಿ.ಮಧುಕುಮಾರ್ ಹಾಗು ಶಿಕ್ಷಕರು ಅಭಿನಂದಿಸಿದ್ದಾರೆ.

## 1 ಲಕ್ಷ ರೂ. ಬೆಲೆಯ ವೈರ್ ಕಳವು

• ಪ್ರಜೋದಯ ವರದಿ

**ಹಾಸನ:** ನಿರ್ಮಾಣ ಹಂತದ ಮನೆಯಲ್ಲಿ ಸುಮಾರು 1 ಲಕ್ಷ ರೂ. ಮೌಲ್ಯದ ಎಲೆಕ್ಟ್ರಿಕ್ ವೈರ್ ಕಳವು ಮಾಡಿರುವ ಘಟನೆ ತಾಲ್ಲೂಕಿನ ಹನುಮಂತಪುರ ಸಮೀಪದ ಪ್ರಕಾಶ್ ಎನ್‌ಕ್ಲೈವ್ ಲೇಔಟ್‌ನಲ್ಲಿ ಇತ್ತೀಚೆಗೆ ನಡೆದಿದೆ. ನಟರಾಜ್ ಎಂಬುವವರಿಗೆ ಸೇರಿದ ಮನೆಯಲ್ಲಿ ಏ.13ರ ರಾತ್ರಿ ಕಳ್ಳತನ ನಡೆದಿದೆ. ಮನೆಯೊಳಗೆ ಅಳವಡಿಸಿದ್ದ ವೈರ್ ಹಾಗು ಕೆಲವು ವೈರ್ ಬಾಕ್ಸ್‌ಗಳನ್ನು ಕಳ್ಳತನ ಮಾಡಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಶಾಲೆಯೊಳಗೆ ಬೆಂಕಿ ಹಚ್ಚಿದ ದುಷ್ಕರ್ಮಿಗಳು

• ಪ್ರಜೋದಯ ವರದಿ

**ಸಕಲೇಶಪುರ:** ಸರ್ಕಾರಿ ಶಾಲೆಯ ಬೀಗ ಒಡೆದು ಬೆಂಕಿ ಹಚ್ಚಿ ದುಷ್ಕೃತ್ಯ ಎಸಗಿರುವ ಘಟನೆ ತಾಲ್ಲೂಕಿನ ಕುಡುಗರಹಳ್ಳಿ ಗ್ರಾಮದಲ್ಲಿ ನಡೆದಿದೆ.

ಅಪರಿಚಿತರು ಶಾಲೆಯ ಮುಖ್ಯ ಬಾಗಿಲಿಗೆ ಹಾಕಿದ್ದ ಬೀಗವನ್ನು ಒಡೆದು ಒಳಪ್ರವೇಶಿಸಿ, ಶಾಲೆಯಲ್ಲಿದ್ದ ಪುಸ್ತಕಗಳು ಹಾಗು ಕೆಲವು ಶಿಕ್ಷಣ ಸಾಮಾಗ್ರಿಗಳಿಗೆ ಬೆಂಕಿ ಹಚ್ಚಿ ಪುಂಡಾಟ ಮೆರೆದಿದ್ದಾರೆ. ಶಾಲೆಯೊಳಗೆ ಮದ್ಯಪಾನ ಮಾಡಿದ್ದು, ಆ ವೇಳೆ ದುಷ್ಕರ್ಮಿ ಒಬ್ಬನ ಶರ್ಟ್‌ಗೆ ಬೆಂಕಿ ತಗುಲಿದ್ದರಿಂದ ಬಟ್ಟೆಯನ್ನು ಅಲ್ಲೇ ಬಿಟ್ಟು ಪರಾರಿಯಾಗಿದ್ದಾರೆಂದು ಪೊಲೀಸರು ಶಂಕಿಸಿದ್ದಾರೆ.



ಘಟನೆಯಿಂದ ಶಾಲೆಯ ಕೆಲ ಪೀಠೋಪಕರಣಗಳು, ಪುಸ್ತಕಗಳು ಹಾಗು ಇತರೆ ಸಾಮಾಗ್ರಿಗಳು ಹಾನಿಗೊಳಗಾಗಿದ್ದು, ಗ್ರಾಮಸ್ಥರಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ. ವಿಷಯ ತಿಳಿದ ಪೊಲೀಸರು ಪರಿಶೀಲನೆ ನಡೆಸಿ, ಆರೋಪಿಗಳ ಪತ್ತೆಗೆ ಕ್ರಮ ಕೈಗೊಂಡಿದ್ದಾರೆ.

## ವಾಟೇಹಳ್ಳಿಯಲ್ಲಿ ಆರೋಗ್ಯ ಉಚಿತ ತಪಾಸಣೆ ಶಿಬಿರ



• ಪ್ರಜೋದಯ ವರದಿ

**ಅರೇಹಳ್ಳಿ:** ಸಾರ್ವಜನಿಕರ ಆರೋಗ್ಯವನ್ನು ವೃದ್ಧಿ ಮಾಡುವ ನಿಟ್ಟಿನಲ್ಲಿ ದೂರದ ಸ್ಥಳಗಳಿಗೆ ಹೋಗಲು ಸಾಧ್ಯವಿರದಂತಹ ಗ್ರಾಮೀಣ ಭಾಗದ ಜನರ ಅನುಕೂಲಕ್ಕಾಗಿ ಆರೋಗ್ಯ ಉಚಿತ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ ಅವರು ಹೇಳಿದರು.

ಬೇಲೂರು ತಾಲ್ಲೂಕಿನ ವಾಟೇಹಳ್ಳಿಯ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ ರಕ್ತದೊತ್ತಡ, ಮಧುಮೇಹ ಹಾಗು ನೇತ್ರ ತಪಾಸಣಾ ಶಿಬಿರದಲ್ಲಿ ಮಾತನಾಡಿದ ಅವರು, ಖಾಯಿಲೆ ಬಂದಾಗ ವ್ಯಥೆ ಪಡುವ ಮುನ್ನ ಎಚ್ಚರಿಕೆ ವಹಿಸಿ ಇಂತಹ ಶಿಬಿರಗಳ ಪ್ರಯೋಜನ ಪಡೆದುಕೊಂಡು ಆರೋಗ್ಯದಲ್ಲಾಗುವ ಬದಲಾವಣೆ ಗಮನಿಸ ಬೇಕೆಂದರು.

ಕಾರ್ಯಕ್ರಮದ ವ್ಯವಸ್ಥಾಪಕ ಚಂದ್ರಶೇಖರ್ ಶೆಟ್ಟಿ ಅವರು ಮಾತನಾಡಿ, ಆರೋಗ್ಯ ಉಚಿತ ತಪಾಸಣೆಯಲ್ಲಿ 80ಕ್ಕೂ ಹೆಚ್ಚಿನ ಮಂದಿ ಭಾಗವಹಿಸಿ ಲಾಭ ಪಡೆದಿದ್ದಾರೆ. ಅರೇಹಳ್ಳಿಯ ಸಮುದಾಯ ಆರೋಗ್ಯ ಕೇಂದ್ರದ ವೈದ್ಯ ಡಾ|| ಅಕ್ಷತ್ ಹಾಗು ಮಂಗಳೂರಿನಿಂದ ಬಂದಂತಹ ವೈದ್ಯರ ಸೇವೆಗೆ ಶ್ಲಾಘನೀಯವೆಂದರು.

ಸ್ಥಳೀಯರಾದ ದುಗ್ಗರಾಜ್ ಅರಸ್, ಅಶೋಕ್, ಧನ ರಾಜ್, ಮಹೇಶ್ ಶೆಟ್ಟಿ, ಕೆಂಚಮ್ಮ, ಶರತ್ ಕುಮಾರ್, ಗುಂಡರಾಜ್ ಅರಸ್, ಮೊಹಮ್ಮದ್ ನಾಸೀರ್, ಚೇತನ್ ಶೆಟ್ಟಿ ಮುಂತಾದವರಿದ್ದರು.

## ಏ.20ರಂದು ಬಸವಣ್ಣ ಜಯಂತಿ ಆಚರಣೆ




• ಪ್ರಜೋದಯ ವರದಿ

**ಹಾಸನ:** ಜಿಲ್ಲಾಡಳಿತ, ಜಿಲ್ಲಾ ವೀರಶೈವ ಲಿಂಗಾಯತ ಮಹಾಸಭಾದಿಂದ ಏ.20ರಂದು ನಗರದಲ್ಲಿ ಬಸವಣ್ಣ ಅವರ ಜಯಂತಿ ಮಹೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಐಸಾಮಿಗೌಡ ಅವರು ತಿಳಿಸಿದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಂಸ್ಕೃತಿಕ ನಾಯಕ ಜಗಜ್ಯೋತಿ ಬಸವೇಶ್ವರರ ಜಯಂತಿ ಆಚರಣೆಯ ಪ್ರಯುಕ್ತ ನಗರದಲ್ಲಿ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ನಗರದ ಅರಳೇಪೇಟೆಯಲ್ಲಿರುವ ಶ್ರೀ ಬಸವೇಶ್ವರ ದೇವಸ್ಥಾನದಲ್ಲಿ ಅಂದು ಬೆಳಿಗ್ಗೆಯಿಂದಲೇ ಕಾರ್ಯಕ್ರಮ ಆರಂಭವಾಗಲಿವೆ ಎಂದರು.

ಅಂದು ಬೆಳಿಗ್ಗೆ 6 ಗಂಟೆಗೆ ದೇವತಾ ಮೂರ್ತಿಗಳಿಗೆ ರುದ್ರಾಭಿಷೇಕ, ವಿಶೇಷ ಮಹಾಪೂಜೆ ಹಾಗು ಮಹಾಮಂಗಳಾರತಿ ನೆರವೇರಲಿದೆ. ಬೆಳಿಗ್ಗೆ 9:30ಕ್ಕೆ ಬಸವೇಶ್ವರ ಸ್ವಾಮಿ ರಥೋತ್ಸವಕ್ಕೆ ಚಾಲನೆ ದೊರೆಯಲಿದೆ. ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸಜ್ಜುಗೊಳಿಸಲಾದ ಬಸವೇಶ್ವರರ ಭಾವ ಚಿತ್ರವಿರುವ ಬೆಳ್ಳಿ ರಥ ಹಾಗು ವಿವಿಧ ಕಲಾ ತಂಡಗಳು, ವಾದ್ಯಗೋಷ್ಠಿಗಳೊಂದಿಗೆ ಮೆರವಣಿಗೆ ಆಯೋಜಿಸಲಾಗಿದೆ ಎಂದರು.

ಅರಳೇಪೇಟೆಯ ದೇವಸ್ಥಾನದಿಂದ ಹೊರಡುವ ಭವ್ಯ ಮೆರವಣಿಗೆಯು ನಗರದ ಮುಖ್ಯ ಬೀದಿಗಳಲ್ಲಿ ಸಂಚರಿಸಿ ಅಂತಿಮವಾಗಿ ಹಾಸನಾಂಬ ಕಲಾಕ್ಷೇತ್ರವನ್ನು ತಲುಪಲಿದೆ. ಮೆರವಣಿಗೆ ನಂತರ ಹಾಸನಾಂಬ ಕಲಾಕ್ಷೇತ್ರದಲ್ಲಿ ಬಸವ ಜಯಂತಿ ಸಭಾ ಕಾರ್ಯಕ್ರಮ ನಡೆಯಲಿದೆ. ಬಳಿಕ ಶ್ರೀ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಆಚರಣ ಸಮಿತಿ ವತಿಯಿಂದ ಸಾರ್ವಜನಿ ಕರಿಗೆ ಪ್ರಸಾದ ವಿನಿಯೋಗವಿದೆ ಎಂದು ತಿಳಿಸಿದರು.

ಮುಖಂಡರಾದ ಮಲ್ಲಿಕಾರ್ಜುನ, ಶೋಭನ್ ಬಾಬು, ರುದ್ರ ಕುಮಾರ್, ಕೃಷ್ಣ ಕುಮಾರ್ ಹೊಸಮನಿ ಇದ್ದರು.

## ಎಬಿವಿಪಿ ಪ್ರತಿಭಟನೆ

» ಮೊದಲನೇ ಪುಟದಿಂದ

2024-25ನೇ ಸಾಲಿನ ವಿದ್ಯಾರ್ಥಿ ವೇತನವನ್ನು ತಡೆ ಹಿಡಿದಿದೆ. ಎಸ್‌ಎಸ್‌ಪಿ ತಂತ್ರಾಂಶದಲ್ಲಿ ವಿದ್ಯಾರ್ಥಿ ವೇತನ ಮಂಜೂರಾಗುವುದಾಗಿ ತೋರಿಸಿದ್ದರೂ ಬ್ಯಾಂಕ್ ಖಾತೆಗೆ ಜಮೆಯಾಗಿಲ್ಲ, ಹಣ ಪಾವತಿಯಾಗುವ ಮೊದಲೇ ಮುಂದಿನ ಶೈಕ್ಷಣಿಕ ಸಾಲಿನ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನಿಸಿರುವುದು ವಿದ್ಯಾರ್ಥಿಗಳಲ್ಲಿ ಗೊಂದಲ ಸೃಷ್ಟಿಸಿದೆ ಎಂದರು.

ಕಳೆದ ಸಾಲಿನ ಮೆಟ್ರಿಕ್ ನಂತರದ (ಪೋಸ್ಟ್ ಮೆಟ್ರಿಕ್) ವಿದ್ಯಾರ್ಥಿ ವೇತನವು ಇನ್ನೂ ಅನೇಕ ವಿದ್ಯಾರ್ಥಿಗಳಿಗೆ ತಲುಪಿಲ್ಲ. ಕೂಡಲೇ ಬಾಕಿ ಇರುವ ಹಣವನ್ನು ಬಿಡುಗಡೆ ಮಾಡಬೇಕು. ವಿದ್ಯಾರ್ಥಿ ವೇತನಕ್ಕಾಗಿ ಮೀಸಲಿಟ್ಟ ಹಣವನ್ನು ಬೇರೆ ಯೋಜನೆಗಳಿಗೆ ಅಥವಾ ಗ್ಯಾರಂಟಿಗಳಿಗೆ ಬಳಸಿಕೊಳ್ಳುವುದನ್ನು ನಿಲ್ಲಿಸಿ ಕೇವಲ ಶೈಕ್ಷಣಿಕ ಉದ್ದೇಶಗಳಿಗಾಗಿಯೇ ಆ ಹಣವನ್ನು ಬಳಕೆ ಮಾಡಬೇಕು. ಹೊಸ ಅರ್ಜಿ ಸಲ್ಲಿಕೆಗೆ ಅವಕಾಶ ನೀಡುವ ಮುನ್ನ ಹಳೆಯ ಬಾಕಿ ಪಾವತಿಸಬೇಕು. ಎಸ್‌ಎಸ್‌ಪಿ ಪೋರ್ಟಲ್‌ಗೆ ಸಂಬಂಧಿಸಿದ ದೂರುಗಳನ್ನು ಕೇಳಲು ಪ್ರತಿ ಜಿಲ್ಲಾ ಕೇಂದ್ರಗಳಲ್ಲಿ ವಿಶೇಷ ಕೌಂಟರ್‌ಗಳನ್ನು ತೆರೆಯಬೇಕು ಮತ್ತು ಗೊಂದಲ ಬಗೆಹರಿಸಬೇಕೆಂದು ಆಗ್ರಹಿಸಿದರು. ಎಬಿವಿಪಿ ದಕ್ಷಿಣ ವಿಭಾಗ ಕಾರ್ಯದರ್ಶಿ ಗೋಪಿ ರಂಗಸ್ವಾಮಿ, ವರುಣ್ ಪುರಾಣಿಕ್, ಭುವನ್, ಪ್ರಭಾತ್, ಮಮತಾ, ರವಿ ಇತರರಿದ್ದರು.

# ಮಹಿಳಾ ಮೀಸಲಾತಿ ಜಾಗೃತಿಗೆ ನಾಳೆ ಸಮಾವೇಶ

## ಬಿಜೆಪಿ ಮಹಿಳಾ ಮೋರ್ಚಾದ ರಾಜ್ಯ ಪ್ರಧಾನ ಕಾರ್ಯದರ್ಶಿ ಶಿಲ್ಪ ಸುವರ್ಣ

• ಪ್ರಜೋದಯ ವರದಿ

**ಹಾಸನ:** ನಾರಿ ಶಕ್ತಿವಂದನ್ ಅಧಿನಿಯಮ-2026ರ ಬಗ್ಗೆ ಜನಜಾಗೃತಿ ಮೂಡಿಸಲು ನಗರದಲ್ಲಿ ಏ.19ರಂದು ಬೈಕ್ ರ್‍ಯಾಲಿ, ಮಹಿಳಾ ಸಮಾವೇಶ, ಸಹಿ ಸಂಗ್ರಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಬಿಜೆಪಿ ಮಹಿಳಾ ಮೋರ್ಚಾದ ರಾಜ್ಯ ಪ್ರಧಾನ ಕಾರ್ಯದರ್ಶಿ ಶಿಲ್ಪ ಸುವರ್ಣ ಅವರು ತಿಳಿಸಿದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಮೂರನೇ ಒಂದು ಭಾಗದಷ್ಟು (ಶೇ.33) ಮೀಸಲಾತಿ ಒದಗಿಸುವ ನಾರಿ ಶಕ್ತಿ ವಂದನಾ ಕಾಯ್ದೆ ಹೊಸ ಯುಗದ ಉದಯ ಕಾಲವಾಗಿದೆ. 7 ದಶಕಗಳ ಮಹಿಳಾ ಮೀಸಲಾತಿ ಬೇಡಿಕೆಯನ್ನು ಕಾರ್ಯರೂಪಕ್ಕೆ ತರಲಿರುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅಭಿನಂದನೆ ಸಲ್ಲಿಸಲಾಗುವುದೆಂದು ಹೇಳಿದರು.

ಮಹಿಳಾ ಮೀಸಲಾತಿ ಜಾರಿಗೊಳ್ಳುವಲ್ಲಿ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರ ಪಾತ್ರವೂ ಪ್ರಮುಖವಾಗಿದೆ. 2010ರಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ನೇತೃತ್ವದಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮಹಿಳಾ ಮೀಸಲಾತಿಯನ್ನು ಶೇ.33ರಿಂದ ಶೇ.50ಕ್ಕೆ ಏರಿಸಿದರು. ಇದು ಕರ್ನಾಟಕದ ನಾಯಕರ ಸಾಧನೆಯ ಫಲವಾಗಿದೆ ಎಂದರು.




ನರೇಂದ್ರ ಮೋದಿ ಅವರ ನೇತೃತ್ವ ಸರ್ಕಾರ ಮಹಿಳೆಯರ ಸಬಲೀಕರಣಕ್ಕಾಗಿ ಹಲವು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಇದರಲ್ಲಿ ಬೇಟಿ ಬಚಾವೋ ಬೇಟಿ ಪಡಾವೋನಂತಹ ಅಭಿಯಾನಗಳು ಸೇರಿವೆ. ಉನ್ನತ ಶಿಕ್ಷಣದಲ್ಲಿ ಮಹಿಳೆಯರ ದಾಖಲಾತಿ ಪ್ರಮಾಣ ಶೇ.80.2ಕ್ಕೆ ಏರಿದೆ. ಸುಕನ್ಯಾ ಸಮೃದ್ಧಿ ಯೋಜನೆಯಡಿ 46 ಮಿಲಿಯನ್‌ಗಿಂತಲೂ ಹೆಚ್ಚು ಖಾತೆಗಳನ್ನು ತೆರೆಯಲಾಗಿದೆ. ಹೆಣ್ಣು ಮಕ್ಕಳ ಭವಿಷ್ಯಕ್ಕೆ ಆರ್ಥಿಕ ಭದ್ರತೆ ನೀಡುತ್ತಿದೆ. ಪೋಷಣ್ ಅಭಿಯಾನದಡಿ 1.4. ಮಿಲಿಯನ್‌ಗಿಂತಲೂ ಹೆಚ್ಚು ಅಂಗನವಾಡಿ ಕೇಂದ್ರಗಳ ಮೂಲಕ ಲಕ್ಷಾಂತರ ಫಲಾನುಭವಿಗಳಿಗೆ ಪೌಷ್ಟಿಕಾಂಶದ ಸೇವೆಗಳನ್ನು ನೀಡಲಾಗುತ್ತಿದೆ ಎಂದರು.

ಮಹಿಳಾ ಮೀಸಲಾತಿ ಜಾರಿಯಾದರೆ ಲೋಕಸಭೆ ಸದಸ್ಯರ ಸಂಖ್ಯೆ 543 ರಿಂದ 816ಕ್ಕೆ ಏರಿಕೆಯಾಗಲಿದೆ. ಇದರಲ್ಲಿ ಮಹಿಳಾ ಮೀಸಲಾತಿ 273 ಸ್ಥಾನಗಳಿಗೆ ಜಾರಿಗೆ ಬರಲಿದೆ. ಜನಪ್ರತಿನಿಧಿಗಳು ಪಕ್ಷಬೇಧ ಮರೆತು ಒಕ್ಕೊರಲಿನಿಂದ ಸ್ವಾಗತಿಸುವ ಸುಸಂದರ್ಭದಲ್ಲಿ ದೇಶದಲ್ಲೆಡೆ ಭಾರತೀಯ ಜನತಾ ಪಾರ್ಟಿ ಹಾಗು ಸಮಾನ ಮನಸ್ಕ ಸಂಘ-ಸಂಸ್ಥೆಗಳು ಸೇರಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ಹೇಳಿದರು. ಮಹಿಳಾ ಮೋರ್ಚಾದ ಜಿಲ್ಲಾಧ್ಯಕ್ಷೆ ಬಿ.ಎ.ನೇತ್ರಾವತಿ, ರತ್ನ ಪ್ರಕಾಶ್ ಮತ್ತಿತರರಿದ್ದರು.

# ಆರೋಗ್ಯಕ್ಕೆ ಜೀವನ ಶೈಲಿ ಅತಿ ಮುಖ್ಯ

• ಪ್ರಜೋದಯ ವರದಿ

**ಸಕಲೇಶಪುರ :** ಮಾನಸಿಕ ಹಾಗು ದೈಹಿಕ ಸದೃಢತೆಗೆ ಯೋಗ ಮತ್ತು ಧ್ಯಾನ ಮಾತ್ರ ಸಾಕಾಗುವುದಿಲ್ಲ, ದೈನಂದಿನ ಜೀವನ ಶೈಲಿಯೂ ಸಮತೋಲನದಲ್ಲಿರಬೇಕೆಂದು ಯೋಗ ಗುರು ಚೇತನ ಗುರೂಜಿ ಅವರು ಹೇಳಿದರು.

ಪಟ್ಟಣದ ಲಯನ್ಸ್ ಸಭಾಂಗಣದಲ್ಲಿ ಲಯನ್ಸ್ ಸೇವಾ ಸಂಸ್ಥೆ ವತಿಯಿಂದ ಆಯೋಜಿಸಿದ್ದ ಯೋಗ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಒತ್ತಡದ ಜೀವನದಿಂದ ಹೊರ ಬರಲು ಯೋಗ-ಧ್ಯಾನದ ಜೊತೆಗೆ ಸರಿಯಾದ ಆಹಾರ ಪದ್ಧತಿ, ಸಕಾರಾತ್ಮಕ ಆಲೋಚನೆ, ಪರಸ್ಪರ ಪ್ರೀತಿ-ವಿಶ್ವಾಸದೊಂದಿಗೆ ಬದುಕುವ ಮನೋಭಾವ ಅಗತ್ಯವಿದೆ ಎಂದು ಹೇಳಿದರು.

ಪ್ರತಿ ವ್ಯಕ್ತಿಯೂ ತಮ್ಮ ಜೀವನದಲ್ಲಿ ಸ್ಪಷ್ಟ ಗುರಿ ಮತ್ತು ಉದ್ದೇಶ ಹೊಂದಿರಬೇಕು. ಜೀವನದ ಪ್ರತಿಯೊಂದು ಕಾರ್ಯವೂ ಆತ್ಮತೃಪ್ತಿಯನ್ನು ನೀಡುವಂತಾಗಿದ್ದರೆ ಮಾತ್ರ ಮಾನಸಿಕ ಹಾಗು ದೈಹಿಕ ಆರೋಗ್ಯ ಉತ್ತಮವಾಗಿರುತ್ತದೆಂದು ತಿಳಿಸಿದರು.



ಇತ್ತೀಚಿನ ದಿನಗಳಲ್ಲಿ ಕಳಪೆ ಗುಣಮಟ್ಟದ ಆಹಾರ ಪದಾರ್ಥಗಳಿಂದ ಜನರ ಆರೋಗ್ಯ ಹಾನಿಗೊಳಗಾಗುತ್ತಿರುವುದು ಆತಂಕಕಾರಿ ಬೆಳವಣಿಗೆ. ಆಸ್ಪತ್ರೆಗಳು ಹಣ ಮಾಡುವ ಕೇಂದ್ರಗಳಾಗಿ ಪರಿಣಮಿಸುತ್ತಿರುವ ಇಂದಿನ ಸಂದರ್ಭದಲ್ಲಿ ಪ್ರತಿಯೊಬ್ಬರೂ ತಮ್ಮ ಆರೋಗ್ಯವನ್ನು ತಾವೇ ಕಾಪಾಡಿಕೊಳ್ಳುವ ಜಾಗೃತಿ ಹೊಂದಬೇಕೆಂದು ಸಲಹೆ ನೀಡಿದರು.

ಮುಂದುವರೆದ ದೇಶಗಳಲ್ಲಿ ಫಾಸ್ಟ್ ಫುಡ್ ಬಳಕೆ ಕಡಿಮೆಯಾಗುತ್ತಿದ್ದು, ಯೋಗ-ಧ್ಯಾನ ಸೇರಿ ವೆಲ್‌ನೆಸ್ ಚಟುವಟಿಕೆಗಳು ಹೆಚ್ಚಾಗುತ್ತಿವೆ. ಆದರೆ, ಭಾರತದಲ್ಲಿ ರಕ್ತದೊತ್ತಡ, ಮಧುಮೇಹ ಮುಂತಾದ ರೋಗಗಳಿಗೆ ಔಷಧಿಗಳ ಅವಲಂಬನೆ ಹೆಚ್ಚುತ್ತಿರುವುದು ಚಿಂತಾಜನಕ ವಿಷಯವಾಗಿದೆ ಎಂದು ಹೇಳಿದರು.

ಲಯನ್ಸ್ ಸಂಸ್ಥೆ ವತಿಯಿಂದ 12 ದಿನಗಳ ಕಾಲ ಉಚಿತವಾಗಿ ಆಯೋಜಿಸಿದ್ದ ಯೋಗ ಶಿಬಿರದಲ್ಲಿ ಅನೇಕರು ಭಾಗವಹಿಸಿ ಸದುಪಯೋಗ ಪಡೆದುಕೊಂಡರು.

ಲಯನ್ಸ್ ಸಂಸ್ಥೆ ತಾಲ್ಲೂಕು ಅಧ್ಯಕ್ಷ ಮಂಜುನಾಥ್, ಜನಜಾಗೃತಿ ವೇದಿಕೆ ಅಧ್ಯಕ್ಷ ಡಾ. ನವೀನ್ ಚಂದ್ರ ಶೆಟ್ಟಿ, ಲಯನ್ಸ್ ತಾಲ್ಲೂಕು ಕಾರ್ಯದರ್ಶಿ ಬಸವರಾಜು, ಯೋಗ ಚೇತನ ಟ್ರಸ್ಟ್ ಅಧ್ಯಕ್ಷ ಲಕ್ಷ್ಮೀ ರಂಗನಾಥ್, ಲಕ್ಷ್ಮಣ ಕೀರ್ತಿ, ಜಗದೀಶ್, ಗೀತಾ ಇತರರಿದ್ದರು.

## ಆದಿಶಕ್ತಿ ಕೆರೆಕೋಡಮ್ಮನವರ ಜಾತ್ರಾ ಮಹೋತ್ಸವ



• ಪ್ರಜೋದಯ ವರದಿ

**ಅರೇಹಳ್ಳಿ:** ಬೇಲೂರು ತಾಲ್ಲೂಕು ಅರೇಹಳ್ಳಿ ಹೋಬಳಿ ಹಿರಿಗರ್ಜೆ-ಕೊಪ್ಪಲು ಗ್ರಾಮದಲ್ಲಿ ಶ್ರೀ ಕ್ಷೇತ್ರ ಆದಿಶಕ್ತಿ ಕೆರೆಕೋಡಮ್ಮನವರ ಜಾತ್ರಾ ಮಹೋತ್ಸವ ಅದ್ದೂರಿಯಾಗಿ ನೆರವೇರಿತು. 3 ದಿನ ಜರುಗುವ ಪೂಜೋತ್ಸವಕ್ಕೆ ಚಾಲನೆ ನೀಡಲಾಯಿತು. ಗೋಧೂಳಿ ಲಗ್ನದಲ್ಲಿ ಗ್ರಾಮ ದೇವತೆ ಹಾಗು ಪರಿವಾರ ದೇವತೆಗಳಿಗೆ ಅಭಿಷೇಕ, ಗಂಗಾ ಪೂಜೆ, ಕೆರೆಕೋಡಮ್ಮನವರಿಗೆ ಮಹಾರುದ್ರಾಭಿಷೇಕ, ಮಹಾ ಮಂಗಳಾರತಿ ಹಾಗು ಪ್ರಸಾದ ವಿನಿಯೋಗ ನಡೆಯಿತು.

ಎರಡನೇ ದಿನ ಅಮ್ಮನವರನ್ನು ಬನಕ್ಕೆ ಹೊರಡಿಸಿ ಶುಭ ಲಗ್ನದಲ್ಲಿ ಅಮ್ಮನವರಿಗೆ ಗಂಗಾ ಸ್ನಾನದಲ್ಲಿ ಪಂಚಾಮೃತ ಅಭಿಷೇಕ, ಮಹಾಂಗಳಾರತಿ ಮುಗಿದ ಬಳಿಕ ಹಗಲು ಉತ್ಸವ ಜರುಗಿತು. ಕೊನೆಯ ದಿನದಂದು ಹವಳಪ್ಪ ಸ್ವಾಮಿಯವರಿಗೆ ಹಾಗು ಚಿಕ್ಕಮ್ಮನವರಿಗೆ ಅಮ್ಮನವರ ಬನದಲ್ಲಿ ಕವಳ ಕಾರ್ಯಕ್ರಮ ಜರುಗಿತು. ಶ್ರೀ ಆದಿಶಕ್ತಿ ಕೆರೆಕೋಡ ಮ್ಮನವರ ಸೇವಾ ಸಮಿತಿ ಅಧ್ಯಕ್ಷ ಹೆಚ್.ಪಿ.ಗೋಪಾಲ್, ಕಾರ್ಯದರ್ಶಿಗಳು ಸೇರಿ ಸುತ್ತಲ ಗ್ರಾಮಸ್ಥರು ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿದ್ದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK